# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 125 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 03–12–2024 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 02 Issue - 125 | RNI No: KARKAN/2023/88462 | Chitradurga | Date: 03-12-2024 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಡಿ.5ಕ್ಕೆ ಜನ ಕಲ್ಯಾಣ ಸ್ವಾಭಿಮಾನಿ ಸಮಾವೇಶ: ಆಂಜನೇಯ 2

ತಾಲೂಕಿನ ಶಾಲೆ ಕಾಲೇಜುಗಳ ಮೂಲಭೂತ ಸೌಕರ್ಯಕ್ಕೆ ಒತ್ತು: ಶಾಸಕ 3

ಕನಕ ಪುರಂದರರು ಕನ್ನಡ ಕೀರ್ತನ ಸಾಹಿತ್ಯದ ಅಶ್ವಿನಿ ದೇವತೆಗಳು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕುರಿ, ಮೇಕೆ ಘಟಕ ಪೂರೈಕೆ ಯೋಜನೆ: ಪರಿಶಿಷ್ಟ ಪಂಗಡದ ಸದಸ್ಯರಿಂದ ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ವತಿಯಿಂದ 2024–25ನೇ ಸಾಲಿನಲ್ಲಿ ಗಿರಿಜನ ಉಪಯೋಜನೆ ಅಡಿಯಲ್ಲಿ ಕುರಿ, ಮೇಕೆ ಘಟಕ ಪೂರೈಕೆ ಯೋಜನೆಯನ್ನು ನಿಗಮದಲ್ಲಿ ನೋಂದಾಯಿತ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಪರಿಶಿಷ್ಟ ಪಂಗಡದ ಸದಸ್ಯರಿಗಾಗಿ ಮಾತ್ರ ಅರ್ಜಿ ಆಹ್ವಾನಿಸಲಾಗಿದೆ. ಡಿ.15 ಅರ್ಜಿ ಸಲ್ಲಿಸಲು ಕೊನೆಯ ದಿನ. ಅರ್ಜಿ ಸಲ್ಲಿಸುವವರು 18 ರಿಂದ 60 ವರ್ಷ ಒಳಗಿನ ಮಹಿಳಾ, ಪುರುಷ ಸದಸ್ಯರಾಗಿದ್ದು, ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘಗಳ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಈ ಯೋಜನೆಯಡಿ 10 ಸುಧಾರಿತ ಹೆಣ್ಣು ಕುರಿ, ಮೇಕೆ, 01 ಟಗರು, ಹೋತಕ್ಕೆ ಒಟ್ಟು ಘಟಕ ದರ ರೂ.66,000/–ಗಳಿದ್ದು, ಶೇ.90ರಷ್ಟು ಸಹಾಯಧನ ಹೊಂದಿರುತ್ತದೆ. ಚಿತ್ರದುರ್ಗ ಜಿಲ್ಲೆಗೆ ಒಟ್ಟು 14 ಗುರಿ ನಿಗಧಿಪಡಿಸಲಾಗಿದೆ. ಚ್ಚಿನ ಮಾಹಿತಿಗಾಗಿ ಹತ್ತಿರದಲ್ಲಿರುವ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘ ಅಥವಾ ಸಹಾಯಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತ, ಪಶು ಆಸ್ಪತ್ರೆ ಆವರಣ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಹೊಳಲ್ಕೆರೆ ಪುರಸಭೆ: ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಪ್ರತ್ಯೇಕ ಪರವಾನಿಗೆ ಕಡ್ಡಾಯ

» **ಚಿತ್ರದುರ್ಗ**

ಹೊಳಲ್ಕೆರೆ ಪುರಸಭೆ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡಲು ವ್ಯಾಪಾರಿಗಳು ಪ್ರತ್ಯೇಕವಾಗಿ ಪರವಾನಿಗೆ ಪಡೆಯುವುದು ಕಡ್ಡಾಯವಾಗಿದೆ. ಪುರಸಭೆಯಿಂದ ಅರ್ಜಿ ನಮೂನೆ ಪಡೆದು, ಅಗತ್ಯ ಮಾಹಿತಿಗಳೊಂದಿಗೆ, ಅರ್ಜಿ ಶುಲ್ಕ ರೂ.500/– ಆಗಿದ್ದು, 1 ವರ್ಷ ಚಾಲ್ತಿಯಲ್ಲಿರುತ್ತದೆ. ಡಿಸೆಂಬರ್ 15 ರೊಳಗೆ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಆಧಾರ್ ಕಾರ್ಡ್, ಬಾಡಿಗೆ ಕರಾರು ಪತ್ರ, ಉದ್ಯಮ ಪರವಾನಿಗೆ, ಉದ್ಯಮ ಫೋಟೋ ಹಾಗೂ ಮಾಲೀಕರ ಫೋಟೋ ದಾಖಲೆಗಳು ಬೇಕು. ಡಿ.15ರ ನಂತರ ಪ್ರತ್ಯೇಕ ಪರವಾನಿಗೆ ಪಡೆಯದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವ ತಂಬಾಕು ವ್ಯಾಪಾರಸ್ಥರ ಮೇಲೆ ದಂಡ ವಿಧಿಸುವುದಲ್ಲದೆ ಉದ್ದಿಮೆ ಪರವಾನಿಗೆಯನು ಸಹ ರದ್ದುಪಡಿಸಿ, ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಹೊಳಲ್ಕೆರೆ ಪುರಸಭೆ ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರ: ಪರಿಶಿಷ್ಟ ಜಾತಿ ಯುವ ಜನರಿಂದ ಅರ್ಜಿ

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಯುವಜನರಿಗೆ ಅನುಷ್ಠಾನಗೊಳಿಸಿರುವ ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಡಿ.08 ಅರ್ಜಿ ಸಲ್ಲಿಸಲು ಕೊನೆಯ ದಿನ. ಎಸ್‌ಎಸ್‌ಎಲ್‌ಸಿ ಪಾಸ್, ಫೇಲ್ ಆದ 16 ರಿಂದ 40 ವರ್ಷ ವಯೋಮಿತಿಯವರಿಗೆ ಡಿಸೆಂಬರ್ 10 ರಿಂದ 17 ರವರೆಗೆ ಬೆಂಗಳೂರಿನಲ್ಲಿ ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರ ನಡೆಯಲಿದೆ. ತರಬೇತಿ ಶಿಬಿರಕ್ಕೆ ಅರ್ಜಿ ಸಲ್ಲಿಸಲು ಪರಿಶಿಷ್ಟ ಜಾತಿಯ ಯುವ ಜನರು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಜಿ ಪಡೆದು ಇದೇ ಡಿ.08ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ತರಬೇತಿ ಶಿಬಿರಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಊಟೋಪಹಾರ, ಪ್ರಮಾಣ ಪತ್ರ ಹಾಗೂ ಈ ಶಿಬಿರದಲ್ಲಿ ಭಾಗಹಿಸುವವರಿಗೆ ಸಾಮಾನ್ಯ ವಸತಿ ವ್ಯವಸ್ಥೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194–235635ಗೆ, ಸಹಾಯವಾಣಿ ಸಂಖ್ಯೆ 155265, ಮೊಬೈಲ್ 9731251411 ಸಂಪರ್ಕಿಸಬಹುದು ಎಂದು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ನಿರುದ್ಯೋಗಿ ಯುವಕರಿಗೆ ಉಜ್ವಲ ಭವಿಷ್ಯದ ಭರವಸೆ

# ಆಕಾಂಕ್ಷಿಗಳ ಆಶಾಕಿರಣ ಯುವನಿಧಿ





» **ಚಿತ್ರದುರ್ಗ**

ಕೆಪಿಎಸ್‌ಸಿ, ಯುಪಿಎಸ್‌ಸಿ, ಎಸ್‌ಎಸ್‌ಸಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ, ಸರ್ಕಾರಿ ಹುದ್ದೆಗಳ ಆಯ್ಕೆಗೆ ಕನಸು ಕಂಡ ಪದವಿ ವಿದ್ಯಾರ್ಥಿಗಳಿಗೆ ಯುವನಿಧಿ ಯೋಜನೆ ಒತ್ತಾಸೆಯಾಗಿ ನಿಂತಿದೆ.

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸ್ಪರ್ಧಾರ್ಥಿಗಳಿಗೆ, ಸ್ಪರ್ಧಾತ್ಮಕ ಪರೀಕ್ಷೆಯನ್ನು ತೆಗೆದುಕೊಳ್ಳಲು ಮತ್ತು ಅರ್ಜಿ ಸಲ್ಲಿಸಲು ಹಣಕಾಸಿನ ಅವಶ್ಯಕತೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಸಿದ್ಧತೆಗಾಗಿ ಪುಸ್ತಕಗಳನ್ನು ಖರೀದಿಸಲು ಹಣಕಾಸಿನ ಅವಶ್ಯಕತೆ ಇದ್ದು, ರಾಜ್ಯ ಸರ್ಕಾರ ಯುವನಿಧಿ ಯೋಜನೆಯ ಮೂಲಕ ಒದಗಿಸುವ ಹಣ ಅಂತಹವರಿಗೆ ಸದುಪಯೋಗವಾಗುತ್ತಿದ್ದು, ಸರ್ಕಾರಿ ಹುದ್ದೆಗಳ ಕನಸು ಕಾಣುವ ವಿದ್ಯಾರ್ಥಿಗಳಿಗೆ ಯುವನಿಧಿ ಯೋಜನೆಯು ಒತ್ತಾಸೆಯಾಗಿ ನಿಂತಿರುವುದಂತೂ ಸ್ಪಷ್ಟ.

ಪದವಿ ಪಡೆದ ತಕ್ಷಣವೇ ಖಾಸಗಿ ಉದ್ಯೋಗ ಅರಸಿ, ದೂರದ ಊರುಗಳಿಗೆ ತೆರಳಿ ಕೆಲಸ ಮಾಡುವ ಅನಿವಾರ್ಯತೆ ಹೊಂದಿದ್ದ ಬಡ ಕುಟುಂಬದ ವಿದ್ಯಾರ್ಥಿಗಳ ಮೇಲಿನ ಒತ್ತಡ ಕಡಿಮೆ ಮಾಡಿರುವ ಯುವನಿಧಿ ಯೋಜನೆ, ಪೋಷಕರ ಆರ್ಥಿಕ ಹೊರೆಯೂ ಕಡಿಮೆ ಮಾಡಿದೆ. ಯುವನಿಧಿ ಯೋಜನೆಯ ಜಿಲ್ಲೆಯ ಫಲಾನುಭವಿಗಳು ಹೆಚ್ಚಾಗಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಧಾರವಾಡ, ಬೆಂಗಳೂರು, ಮೈಸೂರು, ಮಂಗಳೂರು ಜಿಲ್ಲೆ ಸೇರಿದಂತೆ ನೆರೆಯ ರಾಜ್ಯಗಳಲ್ಲಿಯೂ ತರಬೇತಿ ಪಡೆಯುತ್ತಿದ್ದಾರೆ.

ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ರಾಜ್ಯ ಸರ್ಕಾರವು ಯುವನಿಧಿ ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸಿದ್ದು, ನಿರುದ್ಯೋಗಿ ಯುವಕರಿಗೆ ಎರಡು ವರ್ಷಗಳವರೆಗೆ ಅಥವಾ ಫಲಾನುಭವಿಗೆ ಉದ್ಯೋಗ ಸಿಗುವವರೆಗೆ (ಯಾವುದು ಮೊದಲೋ) ನಿರುದ್ಯೋಗ ಭತ್ಯೆ ಒದಗಿಸುವ ಗುರಿ ಹೊಂದಿದೆ.



ಯುವನಿಧಿ ಹಣದಿಂದ ಕೋಚಿಂಗ್: ಬ್ಯಾಂಕಿಂಗ್ ಕ್ಷೇತ್ರದಲ್ಲ ಕೆಲಸ ಮಾಡುವ ಆಸಕ್ತಿ ಇದ್ದು, ಇದಕ್ಕಾಗಿ ಆಂದ್ರಪ್ರದೇಶದ ಅನಂತಪುರ ನಗರದಲ್ಲಿ ಕೋಚಿಂಗ್ ಪಡೆಯುತ್ತಿದ್ದೇನೆ. ಯುವನಿಧಿಯಡಿ ಮಾರ್ಚ್-2024 ರಿಂದ ಪ್ರತಿ ಮಾಹೆ ರೂ.3000/- ಹಣ ಪಾವತಿಯಾಗುತ್ತಿದ್ದು, ಈ ಹಣದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗೆ ಅನುಕೂಲವಾಗುವ ಪುಸ್ತಕಗಳನ್ನು ಖರೀಸಿದ್ದೇನೆ. ಸ್ಪರ್ಧಾತ್ಮಕ ಪರೀಕ್ಷೆ ಶುಲ್ಕವನ್ನು ಸಹ ಭರಿಸಿದ್ದು, ಯುವನಿಧಿ ಯೋಜನೆಯಿಂದ ಅನುಕೂಲವಾಗಿದೆ.

» **ಎನ್.ಮಾಲಾ, ಬಿ.ಕಾಂ. ಹೊಸದುರ್ಗ.**

ಯುವನಿಧಿ ಯೋಜನೆಯು ನಿರುದ್ಯೋಗಿ ಪದವೀಧರರಿಗೆಪ್ರತಿತಿಂಗಳುರೂ.3000/– ಹಾಗೂ ಡಿಪ್ಲೋಮೊ ಪದವೀಧರರಿಗೆ ಪ್ರತಿ ತಿಂಗಳು ರೂ.1500/– ಒದಗಿಸುವ ಅಭೂತಪೂರ್ವ ಯೋಜನೆ ಇದಾಗಿದೆ.

ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವ ನಿಧಿ ಯೋಜನೆಗೆ ಕಳೆದ 2024ರ ಜನವರಿ 12ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್, ಕೆ.ಜೆ. ಜಾರ್ಜ್, ಮಧು ಬಂಗಾರಪ್ಪ ಸೇರಿದಂತೆ ಇನ್ನಿತರೆ ಸಚಿವರು ಚಾಲನೆ ನೀಡಿದ್ದರು.

**ಯುವನಿಧಿ ಯೋಜನೆಯಡಿ 5.67 ಕೋಟಿ ಹಣ ಪಾವತಿ:** ಯುವನಿಧಿ ಯೋಜನೆ ಜಾರಿಯಾದ 2024ರ ಜನವರಿಯಿಂದ ಅಕ್ಟೋಬರ್ ತಿಂಗಳವರೆಗೆ ಜಿಲ್ಲೆಯ 4362 ಫಲಾನುಭವಿಗಳ ಖಾತೆಗೆ ಒಟ್ಟು 5.68 ಕೋಟಿ ರೂ. ನಿರುದ್ಯೋಗಿ ಭತ್ಯೆ ಪಾವತಿಸಲಾಗಿದೆ.

ಜಿಲ್ಲೆಯಲ್ಲಿ ಪದವಿ ಪೂರ್ಣಗೊಳಿಸಿದ ಸಾಮಾನ್ಯ ವರ್ಗದ 2813 ಯುವಕ–ಯುವತಿಯರು, ಪರಿಶಿಷ್ಟ ಜಾತಿಯ 851 ಫಲಾನುಭವಿಗಳು ಹಾಗೂ ಪರಿಶಿಷ್ಟ ವರ್ಗದ622ಫಲಾನುಭವಿಗಳುಸೇರಿದಂತೆ ಒಟ್ಟು 4286 ಫಲಾನುಭವಿಗಳು ಹಾಗೂ ಡಿಪ್ಲೋಮಾ ಪೂರ್ಣಗೊಳಿಸಿದ ಸಾಮಾನ್ಯ ವರ್ಗದ 48 ಫಲಾನುಭವಿಗಳು, ಪರಿಶಿಷ್ಟ ಜಾತಿಯ 21 ಫಲಾನುಭವಿಗಳು ಹಾಗೂ ಪರಿಶಿಷ್ಟ ಪಂಗಡದ 7 ಫಲಾನುಭವಿಗಳು ಸೇರಿದಂತೆ 76 ಫಲಾನುಭವಿಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 4362 ಫಲಾನುಭವಿಗಳು ಇದ್ದಾರೆ.

ಚಿತ್ರದುರ್ಗ ತಾಲ್ಲೂಕಿನಲ್ಲಿ ಅತಿ ಹೆಚ್ಚು 1177 ಫಲಾನುಭವಿಗಳಿದ್ದರೆ, ಚಳ್ಳಕೆರೆಯಲ್ಲಿ 1019 ಫಲಾನುಭವಿಗಳಿದ್ದಾರೆ. ಉಳಿದಂತೆ ಹಿರಿಯೂರು–687, ಹೊಳಲ್ಕೆರೆ–593, ಹೊಸದುರ್ಗ–532 ಹಾಗೂ ಮೊಳಕಾಲ್ಮೂರು ತಾಲ್ಲೂಕಿನಲ್ಲಿ 354 ಫಲಾನುಭವಿಗಳು ಯುವನಿಧಿ ಯೋಜನೆಯ ಲಾಭ ಪಡೆದುಕೊಳ್ಳುತ್ತಿದ್ದಾರೆ.

ಯುವನಿಧಿ ಗ್ಯಾರಂಟಿ ಯೋಜನೆ ಮೂಲಕ ಪದವೀಧರ ನಿರುದ್ಯೋಗಿಗಳಿಗೆ ಮಾಸಿಕ ರೂ.3000 ಹಾಗೂ ಡಿಪ್ಲೊಮಾ ವ್ಯಾಸಂಗ ಪೂರ್ಣಗೊಳಿಸಿದ ನಿರುದ್ಯೋಗಿಗಳಿಗೆ ಮಾಸಿಕ ರೂ.1500 ಸಿಗಲಿದ್ದು, ಈ ಯೋಜನೆಯಡಿ ನಿರುದ್ಯೋಗ ಭತ್ಯೆಯನ್ನು 2 ವರ್ಷಗಳ ಅವಧಿಗೆ ಮಾತ್ರ ನೀಡಲಾಗುತ್ತದೆ. ಪದವಿ ಹಾಗೂ ಡಿಪ್ಲೊಮಾ ವ್ಯಾಸಂಗ ಪೂರ್ಣಗೊಳಿಸಿ 180 ದಿನಗಳು ಆದನಂತರ ಈ ಯೋಜನೆಗೆ ಅರ್ಜಿ ಸಲ್ಲಿಸಲು ಅರ್ಹರು. ಉನ್ನತ ಶಿಕ್ಷಣ ಹಾಗೂ ಉದ್ಯೋಗಕ್ಕೆ ಹೋದರೆ ಈ ಯೋಜನೆಗೆ ಅರ್ಹರಿರುವುದಿಲ್ಲ. ಯುವನಿಧಿಗೆ ನೋಂದಾಯಿಸಿ ಕೊಂಡಿರುವ ಫಲಾನುಭವಿಗಳು ತಾವು ವ್ಯಾಸಂಗ ಮಾಡುತ್ತಿಲ್ಲ, ಸ್ವಯಂ ಉದ್ಯೋಗಿಯಲ್ಲ, ನಿರುದ್ಯೋಗಿ ಎಂದು ಪ್ರತಿ ತಿಂಗಳು 25ನೇ ತಾರೀಕಿನೊಳಗೆ ಸ್ವಯಂ ಘೋಷಣೆ ಸಲ್ಲಿಸಬೇಕು ಎಂದು ಜಿಲ್ಲಾ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

ಸದೃಢರಾಷ್ಟ್ರ ಹಾಗೂ ಸಭ್ಯ ಸಮಾಜ ನಿರ್ಮಿಸುವಲ್ಲಿ ಯುವ ಪೀಳಿಗೆಯ ಪಾತ್ರ ಬಹುಮುಖ್ಯವಾಗಿದ್ದು, ಯುವಕರು ನಿರುದ್ಯೋಗದ ಸುಳಿಗೆ ಸಿಲುಕದೆ, ಸಾಧನೆಯ ಶಿಖರವೇರಲು ರಾಜ್ಯ ಸರ್ಕಾರದ ಯುವನಿಧಿ ಯೋಜನೆ ಒದಗಿಸುವ ಹಣವು ಯುವ ಸಮೂಹಕ್ಕೆ ಆರ್ಥಿಕ ಬಲ ತುಂಬಿದೆ ಎನ್ನುತ್ತಾರೆ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿಯ ಅಧ್ಯಕ್ಷ ಶಿವಣ್ಣ ಅವರು.

## ಪ್ರಮುಖ ಸುದ್ದಿ

### ನಿರುದ್ಯೋಗಿ ಯುವಕರಿಗೆ ತರಬೇತಿ ಜೊತೆಗೆ ಉದ್ಯೋಗ ಪಡೆಯುವ ಅವಕಾಶ

# ಕೌಶಲ್ಯ ತರಬೇತಿ ಪಡೆದು ನಿರುದ್ಯೋಗ ಸಮಸ್ಯೆ ನಿವಾರಿಸಿಕೊಳ್ಳಿ: ಶಾಸಕ ರಘುಮೂರ್ತಿ ಸಲಹೆ





» **ಚಳ್ಳಕೆರೆ**

ಪ್ರತಿನಿತ್ಯವೂ ರಾಜ್ಯದಲ್ಲಿ ನಿರುದ್ಯೋಗಿ ಯುವಕರ ಸಂಖ್ಯೆ ಹೆಚ್ಚಾಗುತ್ತಿದೆ. ಪದವಿ, ಸ್ನಾತಕೋತ್ತರ ಪದವಿ ಹಾಗೂ ಕೆಲವೊಂದು ತಾಂತ್ರಿಕ ವಿಷಯದಲ್ಲಿ ಪರಿಣಿತಿ ಹೊಂದಿದ್ದರೂ ಉದ್ಯೋಗ ಪಡೆಯಲು ವಿಳಂಬವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕೌಶಲ್ಯ ತರಬೇತಿ ಕೇಂದ್ರಗಳ ಮೂಲಕ ತರಬೇತಿ ನೀಡಿ, ತರಬೇತಿ ಪಡೆದವರಿಗೆ ವಿದ್ಯಾರ್ಥಿಗಳ ವೇತನ ಜೊತೆಗೆ ಉದ್ಯೋಗಾವಕಾಶವನ್ನು ಸಹ ಒದಗಿಸುವ ವ್ಯವಸ್ಥೆಯನ್ನು ಬೆಳಗಾವಿಯ ವಿಶ್ವೇಶ್ವರ ತಾಂತ್ರಿಕ ವಿಶ್ವವಿದ್ಯಾಲಯ ಮಾಡುತ್ತಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ರಾಜ್ಯ ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಆವರಣದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ತಾಂತ್ರಿಕ ಶಿಕ್ಷಣ ಇಲಾಖೆಯ ಕೌಶಲ್ಯ ತರಬೇತಿ ಹಾಗೂ ಉದ್ಯೋಗಾವಕಾಶಗಳ ಬಗ್ಗೆ ಹಮ್ಮಿಕೊಂಡಿದ್ದ ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮ ನನ್ನ ವ್ಯಾಪ್ತಿಗೆ ಬರುತ್ತಿದ್ದು, ವಿಶ್ವೇಶ್ವರಯ್ಯತಾಂತ್ರಿಕ ವಿಶ್ವವಿದ್ಯಾಲಯ ಮೂಲಕ ಕ್ಷೇತ್ರದ ನಿರುದ್ಯೋಗಿ ಯುವಕರಿಗೆ ಉದ್ಯೋಗಾವಕಾಶವನ್ನುನೀಡುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವೆ. ತಾಂತ್ರಿಕ ಅಧಿಕಾರಿಗಳು ಈಗಾಗಲೇ ನಿರುದ್ಯೋಗಿ ಯುವಕರ ಬಗ್ಗೆ ಮಾಹಿತಿಯನ್ನು ಪಡೆಯುತ್ತಿದ್ದಾರೆ ಎಂದರು.

ತಾಂತ್ರಿಕ ವಿಶ್ವವಿದ್ಯಾಲಯದ ಕೌಶಲ್ಯ ತರಬೇತಿ ಕೇಂದ್ರದ ನಿರ್ದೇಶಕಿ ಡಾ.ಸಂಧ್ಯಾ ಆರ್.ಅನ್ವೇಕರ್ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ವಿವಿಧ ಹಂತದಲ್ಲಿ ತಾಂತ್ರಿಕನೈಪುಣ್ಯತರಬೇತಿನೀಡಲಾಗುತ್ತದೆ. ಎಸ್‌ಎಸ್‌ಎಲ್‌ಸಿ, ಪಿಯುಸಿ (ಪಾಸ್ ಅಥವಾ ಫೇಲ್), ಪದವಿ, ಸ್ನಾತಕೋತ್ತರ, ಡಿಪ್ಲೊಮೊ, ಇಂಜಿನಿಯರಿಂಗ್ ತರಬೇತಿ ಪಡೆದ ವಿದ್ಯಾರ್ಥಿಗಳು ಇದರ ಸದುಯೋಗ ಪಡೆದುಕೊಳ್ಳಬಹುದಾಗಿದೆ. ತರಬೇತಿ ನಂತರ ಅವರಿಗೆ ವಿಶ್ವವಿದ್ಯಾಲಯದಿಂದ ತರಬೇತಿ ಪತ್ರ ನೀಡಲಾಗುವುದು. ಪತ್ರದ ಆಧಾರದ ಮೇಲೆ ವಿವಿಧ ಬ್ಯಾಂಕ್‌ಗಳಮೂಲಕ ಸಾಲ ಪಡೆದು ಸ್ವಯಂ ಉದ್ಯೋಗವನ್ನು ಪಡೆಯುವ ಅವಕಾಶವಿದೆ. ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗದ ಗುಡಿಕೈಗಾರಿಕೆ, ಕುಲಕಸುಬುಗಳ ಬಗ್ಗೆ ಗಮನ ಕಡಿಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಪಿಎಂ ವಿಶ್ವಕರ್ಮ, ಸಿಎಂಕೆವಿವೈ(ಮುಖ್ಯಮಂತ್ರಿ ಕರ್ನಾಟಕ ಕೌಶಲ್ಯ ಯೋಜನೆ) ಹೀಗೆ ಹಲವಾರು ರೀತಿಯಲ್ಲಿ ತರಬೇತಿ ಪಡೆಯಲು ಅವಕಾಶ ಮಾಡಿಕೊಡಲಾಗಿದೆ. ಆದ್ದರಿಂದ ಗ್ರಾಮೀಣ ಭಾಗದ ನಿರುದ್ಯೋಗ ಯುವಕರೂ ಸೇರಿದಂತೆ ಎಲ್ಲರೂ ಇದರ ಸದುಪಯೋಗ ಪಡೆಯುವಲ್ಲಿ ಮುಂದಾಗಬೇಕೆಂದು ಮನವಿ ಮಾಡಿದರು.

ಹಣಕಾಸು ಅಧಿಕಾರಿ ಪ್ರಶಾಂತ್‌ನಾಯಕ, ಇಂಜಿನಿಯರಿಂಗ್ ಕಾಲೇಜು ಪ್ರಾಂಶುಪಾಲ ಡಾ. ಎಂ.ಎಂ.ಬೆನಾಲ್, ಜಿಟಿಟಿಸಿ ಕಾಲೇಜು ಪ್ರಾಂಶುಪಾಲ ಜಿ.ಆರ್.ತಿಪ್ಪೇಸ್ವಾಮಿ, ಜಿ.ಟಿ.ಶಶಿಧರ, ಕೆಎಸ್‌ಆರ್‌ಟಿಸಿ ಡಿಪೋ ವ್ಯವಸ್ಥಾಪಕ ಪ್ರಭು ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಟಾಸ್ಕ್ ಫೋರ್ಸ್ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಬಿಳಿಜೋಳ ಖರೀದಿಗೆ ಸಂಬಂಧಿಸಿದಂತೆ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಪೂರ್ವಭಾವಿ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿಸೆಂಬರ್ 3 ರಂದು ಮಧ್ಯಾಹ್ನ 3 ಗಂಟೆಗೆ ಆಯೋಜಿಸಲಾಗಿದೆ.

### ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಯುವಜನರಿಗೆ ಕಲಾ ಪ್ರಕಾರಗಳ ಜಾನಪದ ತರಬೇತಿ ಶಿಬಿರಕ್ಕೆ ಅರ್ಜಿಯನ್ನು ಆಹ್ವಾನಿಸಲಾಗಿದೆ.ಪರಿಶಿಷ್ಟ ಜಾತಿ ಯುವ ಜನರಿಗೆ ಜಾನಪದ ಕಲಾ ಪ್ರಕಾರಗಳ ತರಬೇತಿ ಶಿಬಿರವನ್ನು 50 ಶಿಬಿರಾರ್ಥಿಗಳಿಗೆ ಡಿ.10 ರಿಂದ 17 ವರೆಗೆ 8 ದಿನಗಳವರೆಗೆ ತರಬೇತಿ ಆಯೋಜನೆ ಮಾಡಲಾಗಿರುತ್ತದೆ. ಆಸಕ್ತ ಪರಿಶಿಷ್ಟ ಜಾತಿಯ ಯುವಕ ಯುವತಿಯರು ಅರ್ಜಿ ನಮೂನೆಯನ್ನು ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ಪಡೆದು ಭರ್ತಿ ಮಾಡಿ ಡಿಸೆಂಬರ್ 9 ರೊಳಗಾಗಿ ಸಲ್ಲಿಸಲು ಹಾಗೂ ಹೆಚ್ಚಿನ ವಿವರಗಳಿಗೆ ದೂ.ಸಂ: 08192-237480) ಸಂಪರ್ಕಿಸಲು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಗುತ್ತಿಗೆ ಆಧಾರದ ಮೇಲೆ ನೇಮಕಾತಿಗೆ ಅರ್ಜಿ

» ದಾವಣಗೆರೆ

ಖೇಲೋ ಇಂಡಿಯಾ ಯೋಜನೆಯಡಿ ರಾಜ್ಯ ಉತ್ಕೃಷ್ಟತಾ ಕೇಂದ್ರಕ್ಕೆ ಗುತ್ತಿಗೆ ಆಧಾರದ ಮೇಲೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸಕ್ತ ಅಭ್ಯರ್ಥಿಗಳು ನಿಗಧಿತ ನಮೂನೆಗಳನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆ ಇಲ್ಲಿ ಕಚೇರಿಯಲ್ಲಿ ವೇಳೆಯಲ್ಲಿ ಪಡೆದು, ಭರ್ತಿ ಮಾಡಿ ಸಂಬಂಧಿಸಿದ ದಾಖಲೆಗಳನ್ನು ನೋಟರಿ ಮಾಡಿಸಿ ಡಿಸೆಂಬರ್ 6 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ದೂ.ಸಂ:08192-237480 ಸಂಪರ್ಕಿಸಲು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಫೋಟೋಗ್ರಾಫಿ ಮತ್ತು ವಿಡಿಯೋಗ್ರಾಫಿ ತರಬೇತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿಗೆ ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಾಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಇಚ್ಚಿಸುವ ಪರಿಶಿಷ್ಟ ಪಂಗಡದ ಯುವಕ, ಯುವತಿಯರಿಗೆ ತರಬೇತಿ ನೀಡಲು ಅರ್ಜಿ ಅಹ್ವಾನಿಸಲಾಗಿದೆ. ತರಬೇತಿ ಪಡೆಯಲು ಇಚ್ಚಿಸುವರು ಅರ್ಜಿ ನಮೂನೆಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ದಾವಣಗೆರೆ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ದಾವಣಗೆರೆ, ಜಗಳೂರು, ಚನ್ನಗಿರಿ ತಾಲ್ಲೂಕು ಹಾಗೂ ಸಹಾಯಕ ನಿರ್ದೇಶಕರು,(ಗ್ರೇಡ್-2), ಸಮಾಜ ಕಲ್ಯಾಣ ಇಲಾಖೆ, ಹರಿಹರ & ಹೊನ್ನಾಳಿ ಕಚೇರಿಯಲ್ಲಿ ಪಡೆದು, ಡಿ.11 ರೊಳಗಾಗಿ ಸಲ್ಲಿಸಬೇಕು ಎಂದು ಜಿಲ್ಲಾ ಅಧಿಕಾರಿ ನವೀನ್ ಸಿ ಮಠದ್ ತಿಳಿಸಿದ್ದಾರೆ.

### ಟಿಪ್ಪರ್‌ಗೆ ಬೈಕ್ ಡಿಕ್ಕಿ ಓರ್ವ ಯುವಕ ಸಾವು

» ಹೊಸದುರ್ಗ

ಮುಂದೆ ಹೋಗುತ್ತಿದ್ದ ಟಿಪ್ಪರ್ ಒಮ್ಮೆಲೆ ಬ್ರೇಕ್ ಹಾಕಿದ ಪರಿಣಾಮ ಹಿಂದೆ ಬರುತ್ತಿದ್ದ ಬೈಕ್ ಟಿಪ್ಪರ್ ಲಾರಿಗೆ ಅಪ್ಪಳಿಸಿದ ಪರಿಣಾಮ ಬೈಕ್ ಹಿಂಬದಿಯಲ್ಲಿ ಕುಳಿತಿದ್ದ ಯುವಕನೋರ್ವ ಬಿದ್ದ ಪರಿಣಾಮ ಸಾವನ್ನಪ್ಪಿರುವ ಘಟನೆ ಪಟ್ಟಣದ ಕೋರ್ಟ್ ಮಂಭಾಗದಲ್ಲಿ ಸಂಭವಿಸಿದೆ.
ಮೃತನನ್ನು ಅಜ್ಜಂಪುರ ತಾಲೂಕಿನ ಮುದಿಗರೆ ಗ್ರಾಮದ ರಂಗನಾಥ ಎಂಬುವವರ ಪುತ್ರ ಮಾರುತಿ(24) ಎಂದು ತಿಳಿದು ಬಂದಿದ್ದು ಮಾರುತಿ ಹೊಸದುರ್ಗ ಪಟ್ಟಣದ ಹಂಜಿ ಪೆಟ್ರೋಲ್ ಬಂಕ್‌ನಲ್ಲಿ ಕೆಲಸ ಮಾಡುತಿದ್ದು ತನ್ನ ಸ್ನೇಹಿತನ ಬೈಕ್‌ನ ಹಿಂಬದಿಯಲ್ಲಿ ಕುಳಿತುಕೊಂಡು ಬರುತ್ತಿದ್ದ ಸಂಧರ್ಬದಲ್ಲಿ ಈ ಘಟನೆ ನಡೆದಿದ್ದು ತೀರ್ವವಾಗಿ ಗಾಯಗೊಂಡವನನ್ನ ಶಿವಮೊಗ್ಗ ಆಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗಾಗಿ ದಾಖಲು ಮಾಡಲಾಗಿತ್ತು ಅದರೆ ಚಿಕಿತ್ಸೆ ಫಲಕಾರಿಯಾಗದೆ ಸಾವನ್ನಪ್ಪಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಜಿ, ಸಂಧಾನದ ಮೂಲಕ ವ್ಯಾಜ್ಯ ಬಗೆಹರಿಸಿಕೊಂಡು ಸಮಯ, ಹಣ ಉಳಿತಾಯ, ಶೀಘ್ರ ನ್ಯಾಯದಾನ ಪಡೆಯಿರಿ:ರಾಜೇಶ್ವರಿ.ಎನ್.ಹೆಗಡೆ

# ಡಿ.14ರಂದು ರಾಷ್ಟ್ರೀಯ ಲೋಕ ಅದಾಲತ್

» ದಾವಣಗೆರೆ



ಡಿ.14 ರಂದು ತಾಲ್ಲೂಕು, ಜಿಲ್ಲಾ, ರಾಜ್ಯ ಸೇರಿದಂತೆ ರಾಷ್ಟ್ರಾದ್ಯಂತ ರಾಷ್ಟ್ರೀಯ ಲೋಕ ಅದಾಲತ್ ಮೂಲಕ ರಾಜೀಯಾಗಬಲ್ಲ ಎಲ್ಲ ಪ್ರಕರಣಗಳನ್ನು ಸಂಧಾನದ ಮೂಲಕ ಶೀಘ್ರವಾಗಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಮಾಡಿಕೊಳ್ಳಲು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ.ಎನ್ ಹೆಗಡೆ ತಿಳಿಸಿದರು.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ರಾಷ್ಟ್ರಾದ್ಯಂತ ಡಿ.14 ರಂದು ಆಯೋಜಿಸಲಾಗಿರುವ ರಾಷ್ಟ್ರೀಯ ಲೋಕ ಅದಾಲತ್ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಡಿ.2 ರಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿದರು.

ಲೋಕ ಅದಾಲ[illegible]ನಲ್ಲಿ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಇರುವ ರಾಜೀಯಾಗಬಲ್ಲ ಅಪರಾಧ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಸಂಬಂಧವಾಗಿ ಪರಿಹಾರ ಕೋರಿದ ಪ್ರಕರಣಗಳು, ಕಾರ್ಮಿಕ ವಿವಾದಗಳು, ಕೈಗಾರಿಕಾ ಕಾರ್ಮಿಕರಿಗೆ ಸಂಬಂಧಿಸಿದ ಪ್ರಕರಣಗಳು, ವಿದ್ಯುತ್ ಶುಲ್ಕದ ಪ್ರಕರಣಗಳು, ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಬ್ಯಾಂಕ್ ಹಣ ವಸೂಲಾತಿ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಬಗೆಹರಿಸಿಕೊಂಡು ಶೀಘ್ರ ಪರಿಹಾರ ಪಡೆಯಲು ಇದು ಒಂದು ಉತ್ತಮ ಅವಕಾಶವಾಗಿದೆ. ಜಿಲ್ಲೆಯ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ಅವರು ಮನವಿ ಮಾಡಿದರು.

ರಾಜಿ ಆಗುವುದರಿಂದ ಕಕ್ಷಿದಾರ ಹಾಗೂ ನ್ಯಾಯಾಲಯದ ಸಮಯ ಹಾಗೂ ಹಣ ಉಳಿತಾಯ ಆಗುತ್ತದೆ. ಕಕ್ಷಿದಾರ ನ್ಯಾಯಾಲಯದಲ್ಲಿ ದಾವೆ ಹೂಡುವಾಗ ಪಾವತಿಸಿದ ಪೂರ್ಣ ಶುಲ್ಕವನ್ನು ರಾಜೀ ಆದ ನಂತರ ಮರು ಪಾವತಿಸಲಾಗುವುದು. ಹಾಗೂ ಇಬ್ಬರೂ ಪಕ್ಷಗಾರರ ಮಧ್ಯ ಇದ್ದ ದ್ವೇಷ ದೂರವಾಗಿ ಅನ್ಯೋನ್ಯವಾಗಿರುತ್ತಾರೆ.

ಡಿ.14 ರಂದು ಎರಡನೇ ಶನಿವಾರವಾಗಿದ್ದು, ಬೇರೆ ಯಾವುದೇ ಕಲಾಪಗಳು ನಡೆಯದೇ ಸಂಪೂರ್ಣವಾಗಿ ಲೋಕ ಅದಾಲತ್ ಪ್ರಕರಣಗಳ ರಾಜೀ ಸಂಧಾನ ನಡೆಯಲಿದೆ. ಜಿಲ್ಲಾ ಮಟ್ಟದಲ್ಲಿ ನ್ಯಾಯಾಧೀಶರು ಕಲಾಪ ನಡೆಸುವರು. ಇದೇ ರೀತಿ ತಾಲ್ಲೂಕು ಮಟ್ಟದಲ್ಲೂ ಅದಾಲತ್ ನಡೆಯಲಿದೆ. ನ್ಯಾಯಾಧೀಶರೊಂದಿಗೆ ವಕೀಲರು ಮತ್ತು ಕಕ್ಷಿದಾರರೂ ಕಲಾಪದಲ್ಲಿ ಪಾಲ್ಗೊಳ್ಳುವರು.

ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಒಟ್ಟು 40,550 ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳು ಬಾಕಿ ಇದ್ದು ಈ ಪ್ರಕರಣಗಳಲ್ಲಿ ಒಟ್ಟು 17 ರಿಂದ 18 ಸಾವಿರ ರಾಜಿ ಆಗಬಲ್ಲ ಪ್ರಕರಣಗಳನ್ನು ಗುರುತಿಸಿ ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ.

ಸೆಪ್ಟೆಂಬರ್ ಮಾಹೆಯಲ್ಲಿ ಒಟ್ಟು 7042 ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಶೀಘ್ರ ಇತ್ಯರ್ಥಪಡಿಸಲಾಗಿತ್ತು. ಈ ಬಾರಿ ಕಳೆದ ಬಾರಿಗಿಂತ ಹೆಚ್ಚಿನ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ.

ಲೋಕಅದಾಲತ್‌ಬಗ್ಗೆಸಾರ್ವಜನಿಕರಲ್ಲಿ ಅರಿವು ಕಡಿಮೆ ಇದ್ದು, ಹೆಚ್ಚಿನ ಪ್ರಚಾರ ಮತ್ತು ಮಾಹಿತಿ ನೀಡುವ ಮೂಲಕ ಜನರಲ್ಲಿ ಅರಿವು ಹೆಚ್ಚಿಸಬೇಕು. ಸಣ್ಣ ಪುಟ್ಟ ಪ್ರಕರಣಗಳ ಕುರಿತು ರಾಜೀ ಸಂಧಾನದ ಮೂಲಕ ವ್ಯಾಜ್ಯ ಪರಿಹರಿಸಿಕೊಳ್ಳಬಹುದು. ನ್ಯಾಯಾಲಯಕ್ಕೆ ಹೋಗುವ ಅವಶ್ಯಕತೆ ಇಲ್ಲ ಎಂಬುದನ್ನು ಪರಿಣಾಮಕಾರಿಯಾಗಿ ಜನ ಸಾಮಾನ್ಯರಲ್ಲಿ ಅರಿವು ಮೂಡಿಸಿದರೆ ನ್ಯಾಯಾಲಯಕ್ಕೆ ಬರುವ ಪ್ರಕರಣಗಳ ಸಂಖ್ಯೆ ಕಡಿಮೆ ಆಗುತ್ತದೆ ಎಂಬ ಆಶಯ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ ಮ.ಕರೆಣ್ಣನವರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ವಕೀಲರಾದ ನಿವೇದಿತಾ, ಬಸವರಾಜು ಗೋಪನಾಳು, ಮಂಜುನಾಥ್, ಪಾಲ್ಗೊಂಡಿದ್ದರು.

## ಡಿ.5ಕ್ಕೆ ಜನ ಕಲ್ಯಾಣ ಸ್ವಾಭಿಮಾನಿ ಸಮಾವೇಶ



» ಚಿತ್ರದುರ್ಗ

ಜನ ಕಲ್ಯಾಣ ಸ್ವಾಭಿಮಾನಿ ಸಮಾವೇಶವನ್ನು ಡಿ.5 ರಂದು ಹಾಸನದಲ್ಲಿ ನಡೆಸಲಾಗುವುದೆಂದು ಮಾಜಿ ಸಚಿವ ಹೆಚ್.ಆಂಜನೇಯ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿಮಾತನಾಡಿದಅವರುರೈತರು, ಕಾರ್ಮಿಕರು, ವಿದ್ಯಾರ್ಥಿಗಳು, ನಿರುದ್ಯೋಗಿ ಯುವಕ-ಯುವತಿಯರು ಶೋಷಿತರು, ಮಹಿಳೆಯರಲ್ಲಿ ಬಲ ತುಂಬುವ ಉದ್ದೇಶದಿಂದ ಹಮ್ಮಿಕೊಂಡಿರುವ ಸಮಾವೇಶದಲ್ಲಿ ಜಿಲ್ಲೆಯ ಆರು ತಾಲ್ಲೂಕುಗಳಿಂದ ಸಾವಿರಾರು ಕಾರ್ಯಕರ್ತರು ಪಾಲ್ಗೊಳ್ಳುವರು. ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಹಿಂದುಳಿದವರನ್ನು ಬಲಪಡಿಸುವುದು ಜನ ಕಲ್ಯಾಣ ಸ್ವಾಭಿಮಾನಿ ಸಮಾವೇಶದ ಉದ್ದೇಶ ಎಂದು ಹೇಳಿದರು.

ವಿಧಾನಸಭೆ ಚುನಾವಣೆ ಪೂರ್ವದಲ್ಲಿ ಘೋಷಿಸಿದಂತೆ ಐದು ಉಚಿತ ಗ್ಯಾರೆಂಟಿಗಳನ್ನು ಈಡೇರಿಸಿ ನುಡಿದಂತೆ ನಡೆದಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಹದಿನೇಳು ಬಜೆಟ್ ಮಂಡಿಸಿರುವ ಅನುಭವವಿದೆ. ಕೋಮುವಾದಿ ಬಿಜೆಪಿ.ಯವರು ಮುಡಾ, ವಾಲ್ಮೀಕಿ ಹಗರಣದಲ್ಲಿ ಸಿದ್ದರಾಮಯ್ಯನವರನ್ನು ಸಿಲುಕಿಸಲು ಏನೆಲ್ಲಾ ಕುತಂತ್ರ ನಡೆಸಿದರು ರಾಜ್ಯದ ಮೂರು ವಿಧಾನಸಭೆ ಉಪ ಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಕೈಹಿಡಿದು ಬಿಜೆಪಿ. ಅಪ ಪ್ರಚಾರಕ್ಕೆ ತಕ್ಕ ಉತ್ತರ ನೀಡಿದ್ದಾರೆಂದರು.

ಯಾವುದೇ ಕಪ್ಪುಚುಕ್ಕೆಯಿಲ್ಲದ ಮುಖ್ಯಮಂತ್ರಿ ಸಿದ್ದರಾಮಯ್ಯನವರುಉಚಿತವಿದ್ಯುತ್,ಗೃಹಲಕ್ಷ್ಮಿ, ಶಕ್ತಿ ಯೋಜನೆ, ಅನ್ನಭಾಗ್ಯ, ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಕಲ್ಪಿಸಿರುವುದನ್ನು ಸಹಿಸದೆ ಬಿಜೆಪಿ.ಯವರು ಇಲ್ಲಸಲ್ಲದ ಆರೋಪ ಹೊರಿಸುತ್ತಿರುವುದರಲ್ಲಿ ಅರ್ಥವಿಲ್ಲ. ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಿರುವ ನರೇಂದ್ರಮೋದಿಯಿಂದ ಯಾವುದೆ ಬದಲಾವಣೆಯಾಗಿಲ್ಲ. ಅದಾನಿ, ಅಂಬಾನಿ, ದೊಡ್ಡ ಉದ್ಯಮಿಗಳಿಗೆ ಅನುಕೂಲವಾಗಿದೆ. ಬಡವರ ಕಷ್ಟ ಗೊತ್ತಿಲ್ಲ. ವರ್ಷಕ್ಕೆ ಎರಡು ಕೋಟಿ ಉದ್ಯೋಗ ನೀಡುವುದಾಗಿ ಯುವ ಸಮೂಹವನ್ನು ವಂಚಿಸಿದ್ದಾರೆ. ರೈತರ ಆದಾಯ ದುಪ್ಪಟ್ಟುಗೊಳಿಸುವುದಾಗಿ ಭರವಸೆ ನೀಡಿ ಯಾವುದನ್ನು ಈಡೇರಿಸಿಲ್ಲ ಎಂದು ಹೆಚ್. ಆಂಜನೇಯ ಆಪಾದಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಕೃಷ್ಣಮೂರ್ತಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರುಗಳಾದ ಆರ್.ನರಸಿಂಹರಾಜ, ಬಿ.ಪಿ.ಪ್ರಕಾಶ್‌ಮೂರ್ತಿ, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಆರ್.ಪ್ರಕಾಶ್

ಬಿ.ಪಿ.ತಿಪ್ಪೇಸ್ವಾಮಿ, ಲಿಡ್ಕರ್ ಮಾಜಿ ಚೇರ್ಮನ್ ಓ.ಶಂಕರ್, ವಕೀಲರುಗಳಾದ ರವೀಂದ್ರ, ಶರಣಪ್ಪ ಇನ್ನು ಅನೇಕರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಚಿತ್ರದುರ್ಗದ ಹೆಚ್.ಪ್ಯಾರೆಜಾನ್‌ಗೆ ಕನ್ನಡ ವಿಕಾಸ ರತ್ನ ಪ್ರಶಸ್ತಿ ಪ್ರಧಾನ



» ಚಿತ್ರದುರ್ಗ

ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆಯಿಂದ ಮೈಸೂರಿನ ನಾಲ್ವಡಿ ಕೃಷ್ಣರಾಜ ಒಡೆಯರ್ ಸಭಾಂಗಣ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ನಡೆದ ಕನ್ನಡ ಹಬ್ಬದಲ್ಲಿ ಜಾನಪದ ಜಾಗೃತಿ ಪರಿಷತ್ ರಾಜ್ಯಾಧ್ಯಕ್ಷ ಚಿತ್ರದುರ್ಗದ ಹೆಚ್.ಪ್ಯಾರೆಜಾನ್‌ರವರಿಗೆ ಕನ್ನಡ ವಿಕಾಸ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.ಕೊಳಗೇರಿ ನಿವಾಸಿಗಳ ಹಕ್ಕುಗಳಿಗಾಗಿ ನಿರಂತರವಾಗಿ ಹೋರಾಟ ಮಾಡಿಕೊಂಡು ಬರುತ್ತಿರುವ ಇವರ ಸಮಾಜ ಸೇವೆಯನ್ನು ಗುರುತಿಸಿ ಪ್ರಶಸ್ತಿ ನೀಡಲಾಗಿದೆ.ಕರ್ನಾಟಕ ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ ಸಂಸ್ಥಾಪಕ ಅಧ್ಯಕ್ಷೆ ಹೆಚ್.ಎಲ್. ಯಮುನಾ ಇನ್ನು ಅನೇಕರು ಚಿತ್ರದಲ್ಲಿದ್ದಾರೆ.

### ಶಿಷ್ಯವೇತನಕ್ಕೆ ಅರ್ಜಿ

ದಾವಣಗೆರೆ: ವಿಶ್ವವಿದ್ಯಾಲಯದಲ್ಲಿ ಪೋಸ್ಟ್ ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ ರೂ.25,000/-ಗಳಂತೆ ಶಿಷ್ಯ ವೇತನ ಪಡೆಯಲು ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 14 ಕೊನೆಯ ದಿನವಾಗಿರುತ್ತದೆ.

## ಬೇಡಿಕೆಗಳ ಈಡೇರಿಕೆಗಾಗಿ ಪುಸ್ತಕ ಬರಹಗಾರರ ಪ್ರತಿಭಟನೆ

» ಚಿತ್ರದುರ್ಗ

ಜಿಲ್ಲೆಯ ಆರು ತಾಲ್ಲೂಕಿನ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟಗಳಲ್ಲಿನ ಮುಖ್ಯ ಪುಸ್ತಕ ಬರಹಗಾರರು, ಸ್ಥಳೀಯ ಸಮುದಾಯ ಸಂಪನ್ಮೂಲ ಸಖಿಯರು ವೇತನ ಹೆಚ್ಚಳ ಮತ್ತು ಇತರೆ ಬೇಡಿಕೆಗಳನ್ನು ಈಡೇರಿಸುವಂತೆ ಜಿಲ್ಲಾಧಿಕಾರಿಗೆ ಸೋಮವಾರ ಮನವಿ ಸಲ್ಲಿಸಿದರು.
ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸ್ವ-ಸಹಾಯ ಗುಂಪುಗಳ ಒಕ್ಕೂಟಗಳನ್ನು ರಚಿಸಿಕೊಂಡು ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಗಳನ್ನು ತಲುಪಿಸುವಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತ ಬರುತ್ತಿದ್ದರೂ ವೇತನ ಹೆಚ್ಚಳವಾಗಿಲ್ಲ.

ಮುಖ್ಯ ಪುಸ್ತಕ ಬರಹಗಾರರಿಗೆ ಮಾಸಿಕ ಇಪ್ಪತ್ತು ಸಾವಿರ ರೂ. ಸ್ಥಳೀಯ ಸಂಪನ್ಮೂಲ ಸಖಿಯರಿಗೆ ತಿಂಗಳಿಗೆ ಹದಿನೈದು ಸಾವಿರ ರೂ.ಗಳ ವೇತನ ಕೊಡಬೇಕೆಂದು ಪ್ರತಿಭಟನಾನಿರತ ಮಹಿಳೆಯರು ಒತ್ತಾಯಿಸಿದರು.ಸರ್ಕಾರದಿಂದ ನೇರವಾಗಿ ವೇತನ ಬ್ಯಾಂಕ್ ಖಾತೆಗಳಿಗೆ ಜಮೆಯಾಗಬೇಕು. ವೇತನ ಸಹಿತ ಹೆರಿಗೆ ರಜೆ ಮಂಜೂರು ಮಾಡಬೇಕು.

ನಮ್ಮ ಮೇಲೆ ನಡೆಯುತ್ತಿರುವ ಮಾನಸಿಕ ದೌರ್ಜನ್ಯಗಳು ನಿಲ್ಲಲಿ. ಇ.ಎಸ್.ಐ. ಮತ್ತು ಪಿ.ಎಫ್. ಸೌಲಭ್ಯಗಳನ್ನು ನೀಡಬೇಕೆಂದು ಮುಖ್ಯ ಪುಸ್ತಕ ಬರಹಗಾರರು ಹಾಗೂ ಸಖಿಯವರು ಆಗ್ರಹಿಸಿದರು.ಸುನಿತ, ಅನಿತ, ಮಂಜುಳ, ವನಿತಮ್ಮ, ನಿರ್ಮಲ, ವಿಂದ್ಯಾ, ಉಷ, ತ್ರಿವೇಣಿ, ಸೌಮ್ಯ, ಬಸಮ್ಮ, ರಾಧ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಮುಖ್ಯ ಪುಸ್ತಕ ಬರಹಗಾರರು ಹಾಗೂ ಸಖಿಯರಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ.

ಪ್ರಮುಖ ಸುದ್ದಿ

# ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಕಾರ್ತಿಕಮಾಸದ ಪೂಜೆ

» ಚಳ್ಳಕೆರೆ





ಇಲ್ಲಿನ ತ್ಯಾಗರಾಜ ನವಚೇತನ ಶಾಲೆ ಆವರಣದಲ್ಲಿರುವ ಶ್ರೀಮಲ್ಲಿಕಾರ್ಜುನಸ್ವಾಮಿ ದೇವಸ್ಥಾನದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಕಾರ್ತಿಕಮಾಸದ ವಿಶೇಷ ಪೂಜೆಯನ್ನು ಭಕ್ತಿ, ಸಂಭ್ರಮದಿಂದ ನಡೆಸಲಾಯಿತು.

ದೇವಸ್ಥಾನದ ಹೊರ ಆವರಣದಲ್ಲಿ ಮಹಿಳಾ ಮಂಡಳಿ ವತಿಯಿಂದ ಭಜನಾ ಕಾರ್ಯಕ್ರಮ ನಡೆದರೆ, ಗರ್ಭಗುಡಿಯ ಮುಂಭಾಗದಲ್ಲಿ ವಿಶೇಷವಾದ ರಂಗೋಲಿಯ ಮೇಲೆ ದೀಪಗಳನ್ನು ಹಚ್ಚಲಾಯಿತು.

ನೂರಾರು ಮಹಿಳೆಯರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲರಿಗೂ ಪ್ರಸಾದ ವಿತರಿಸಲಾಯಿತು.

ದೇವಸ್ಥಾನ ಆಡಳಿತ ಮಂಡಳಿ ನಿರ್ದೇಶಕ, ನಿವೃತ್ತ ಶಿಕ್ಷಕ ಪಿ.ಜಗದೀಶ್ ಮಾತನಾಡಿ, ಕಾರ್ತಿಕ ಮಾಸದ ಹಿನ್ನೆಲೆಯಲ್ಲಿ ಶ್ರೀಮಲ್ಲಿಕಾರ್ಜುನ ಸ್ವಾಮಿಗೆ ವಿಶೇಷ ಅಭಿಷೇಕ, ಪೂಜಾ ಕಾರ್ಯಕ್ರಮ ನಡೆಸಲಾಯಿತು. ಎಂದಿನಂತೆ ಶ್ರೀಸ್ವಾಮಿಗೆ ಪೂಜೆ ಸಲ್ಲಿಸಿದ ನಂತರ ಪೂಜಾ ಕಾರ್ಯದಲ್ಲಿ ಪಾಲ್ಗೊಂಡಿದ್ದ ಎಲ್ಲಾ ಭಕ್ತರಿಗೂ ಪ್ರಸಾಧ ವಿತರಿಸಲಾಯಿತು. ವಿವಿಧ ಹೂ, ಹಣ್ಣುಗಳಿಂದ ಸ್ವಾಮಿಯನ್ನು ಅಲಂಕರಿಸಲಾಗಿತ್ತು. ಪೂಜಾ ಕಾರ್ಯದಲ್ಲಿ ಸಹಕರಿಸಿದ ಎಲ್ಲರಿಗೂ ದೇವಸ್ಥಾನದ ಆಡಳಿತ ಮಂಡಳಿ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯೆ ಪಾಲಮ್ಮ, ಸುಮಭರಮಣ್ಣ, ಎಸ್. ಎಂ.ಗಂಗಾಧರಯ್ಯ, ಚಿದಾನಂದಸ್ವಾಮಿ, ಮುಕುಂದ, ಭೀಮಣ್ಣ, ಜಗದೀಶ್, ಭಜನಾ ಮಂಡಳಿಯ ಶುಭಸೋಮಶೇಖರ್, ಮಂಜುಳಾ,ಮಂಗಳಾ,ವನಜಾ,ಶಕುಂತಲ ಮುಂತಾದವರು ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ತಾಲೂಕಿನ ಶಾಲೆ ಕಾಲೇಜುಗಳ ಮೂಲಭೂತ ಸೌಕರ್ಯಕ್ಕೆ ಒತ್ತು-ಗೋವಿಂದಪ್ಪ



» **ಹೊಸದುರ್ಗ**

ತಾಲೂಕಿನ ಶಾಲೆ ಕಾಲೇಜುಗಳ ಮೂಲಭೂತ ಸೌಕರ್ಯಕ್ಕೆ ಒತ್ತು ನೀಡಲಾಗುವುದು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು. ಅವರು ತಾಲೂಕಿನ ಕಸಬಾ ಹೋಬಳಿ ಕ್ಯಾದಿಗೆರೆ ಗ್ರಾಮದ ಸರ್ಕಾರಿ ಶಾಲೆಯ ನೂತನ ಕೊಠಡಿ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ಗುತ್ತಿಕಟ್ಟೆ ಲಂಬಾಣಿಹಟ್ಟಿ, ಕ್ಯಾದಿಗೆರೆ, ಆನಿವಾಳ ಗ್ರಾಮದ ಸ.ಹಿ.ಪ್ರಾ.ಶಾಲೆಗಳಿಗೆ ನೂತನ ವಿವೇಕ ಶಾಲಾ ಕೊಠಡಿಗಳನ್ನು ನಿರ್ಮಾಣ ಮಾಡಲಾಗಿದೆ ಎಂದರು. ಕೆಲ್ಲೋಡು ಮತ್ತು ಕುರುಬರಹಳ್ಳಿ ಗ್ರಾಮದಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಮನೆ ಮನೆಗೆ ನೀರು ಕೊಡುವ ಯೋಜನೆಯ ಕಾಮಗಾರಿಗಳಿಗೆ ಇಂದು ಚಾಲನೆ ನೀಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಸ್ಯೆಯದ್ ಮೋಸೀನ್ ಮಾತನಾಡಿ ಶಾಸಕರ ನೇತೃತ್ವದಲ್ಲಿ ಶಾಲೆಗಳಿಗೆ ಅಗತ್ಯವಿರುವ ನೂತನ ಕೊಠಡಿ, ಹಾಗು ದುರಸ್ತಿ ಶಾಲೆಗಳನ್ನು ಗುರುತಿಸಲಾಗಿದೆ, ಹಲವು ಶಾಲೆಗಳಿಗೆ ಪೀಠೋಪಕರಣ ಹಾಗು ಪಾಠೋಪಕರಣ ಒದಗಿಸಲಾಗಿದೆ ಎಂದರು. ಕೆಲ್ಲೋಡು ಮುಖಂಡರುಗಳು, ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳು ಹಾಗೂ ಗ್ರಾಮಸ್ಥರುಗಳು ಹಾಜರಿದ್ದರು.

## ಎದೆನೋವು ತಾಳದೆ ಬೆಸ್ಕಾಂ ಉದ್ಯೋಗಿ ಓಬಣ್ಣ ನೇಣಿಗೆ ಶರಣು

» **ಚಳ್ಳಕೆರೆ**

ತಾಲ್ಲೂಕಿನ ಸಾಣಿಕೆರೆ ಗ್ರಾಮದ ಬೆಸ್ಕಾಂ ಉದ್ಯೋಗಿ ಓಬಣ್ಣ(45) ಅನಾರೋಗ್ಯ ಹಿನ್ನೆಲೆಯಲ್ಲಿ ತನ್ನ ಹೊಲದಲ್ಲೇ ನೇಣುಹಾಕಿಕೊಂಡು ಮೃತಪಟ್ಟಿರುತ್ತಾನೆ. ಕಳೆದ ಕೆಲವು ವರ್ಷಗಳಿಂದ ಎದೆನೋವು, ಭುಜನೋವಿನಿಂದ ನರಳುತ್ತಿದ್ದು ನೇಣುಹಾಕಿಕೊಂಡು ಮೃತಪಟ್ಟಿರುತ್ತಾನೆ. ಪತ್ನಿ ಮಂಜುಳಾ ಈ ಬಗ್ಗೆ ಪೊಲೀಸರಿಗೆ ದೂರು ನೀಡಿ, ಮೃತ ಓಬಣ್ಣ ಬೆಂಗಳೂರಿನ ಕೋರಮಂಗಲ ವಿಭಾಗದ ವಿದ್ಯುತ್ ಸರಬರಾಜು ಕಂಪನಿಯಲ್ಲಿ ಲೈನ್‌ಮ್ಯಾನಾಗಿ ಕಾರ್ಯನಿರ್ವಹಿಸುತ್ತಿದ್ದ ಆಗಾಗೆ ಸಾಣೀಕೆರೆಗೆ ಬರುತ್ತಿದ್ದರು. ನ.29ರಂದು ಬೆಂಗಳೂರಿನಿಂದ ಸಾಣಿಕೆರೆ ಬಂದ ಸಂದರ್ಭದಲ್ಲಿ ಎದೆನೋವು ಕಾಣಿಸಿಕೊಂಡಿದೆ. ಚಿತ್ರದುರ್ಗದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ವಾಪಾಸ್ ಬಂದಿದ್ದೆವು. ಡಿ.2ರ ಬೆಳಗ್ಗೆ ಮನೆಯಿಂದ ಹೊರಹೋದವರು ಜಮೀನಿನ ಹುಣಸೆ ಮರಕ್ಕೆ ನೇಣುಹಾಕಿಕೊಂಡಿದ್ದಾನೆ. ಯಾವುದೇ ಅನುಮಾನವಿಲ್ಲವೆಂದು ದೂರಿನಲ್ಲಿ ತಿಳಿಸಿದ್ದಾಳೆ.

## ಇಂದು ವಿಶ್ವ ಏಡ್ಸ್ ದಿನ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕ, ರಾಷ್ಟ್ರೀಯ ಆರೋಗ್ಯ ಅಭಿಯಾನ, ಮಹಾರಾಜ ಮದಕರಿ ನಾಯಕ ಪ್ರಥಮ ದರ್ಜೆ ಕಾಲೇಜು ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಇದೇ ಡಿಸೆಂಬರ್ 03ರಂದು ಮಧ್ಯಾಹ್ನ 12ಕ್ಕೆ ನಗರದ ಮಹಾರಾಜ ಮದಕರಿ ನಾಯಕ ಪ್ರಥಮ ದರ್ಜೆ ಕಾಲೇಜಿನ ಶ್ರೀ ಗುರು ವಾಲ್ಮೀಕಿ ಮಹರ್ಷಿಗಳ ಸಭಾಂಗಣದಲ್ಲಿ "ವಿಶ್ವ ಏಡ್ಸ್ ದಿನ" ಹಮ್ಮಿಕೊಳ್ಳಲಾಇದೆ. ಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಉದ್ಘಾಟನೆ ನೆರವೇರಿಸುವರು. ಜಿಲ್ಲಾ ಮದಕರಿ ನಾಯಕ ವಿದ್ಯಾಸಂಸ್ಥೆ ಅಧ್ಯಕ್ಷ ಎಸ್.ಸಂದೀಪ್ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಏಡ್ಸ್ ಮತ್ತು ಕ್ಷಯರೋಗ ನಿಯಂತ್ರಣ ಕಾರ್ಯಕ್ರಮ ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಸಿ.ಓ.ಸುಧಾ ಪ್ರಾಸ್ತಾವಿಕ ನುಡಿಗಳನ್ನಾಡುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಜಿಲ್ಲಾಸ್ಪತ್ರೆ ಚರ್ಮರೋಗ ತಜ್ಞ ಡಾ.ವಿಜಯಕುಮಾರ್ ಭಾಗವಹಿಸುವರು. ಮಹಾರಾಜ ಮದಕರಿ ನಾಯಕ ಕಾಲೇಜಿನ ಎನ್‌ಎಸ್‌ಎಸ್ ಸಂಚಾಲಕರಾದ ಪ್ರೊ.ಎನ್.ಟಿ.ಗಂಗಮ್ಮ, ಪ್ರೊ.ಎನ್.ಶ್ರೀನಿವಾಸ್, ಡಾ.ಧನಂಜಯ್, ಜಿಲ್ಲಾಸ್ಪತ್ರೆ ಎಆರ್‌ಟಿ ಕೇಂದ್ರ ವೈದ್ಯಾಧಿಕಾರಿ ಡಾ.ರೂಪಶ್ರೀ ಉಪಸ್ಥಿತರಿರುವರು. ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಹಾಗೂ ಮಹಾರಾಜ ಮದಕರಿ ನಾಯಕ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಿ.ಆರ್.ರಂಗಸ್ವಾಮಿ ಅವರಿಗೆ ಸನ್ಮಾನಿಸಲಾಗುವುದು ಎಂದು ಜಿಲ್ಲಾ ಏಡ್ಸ್ ಮತ್ತು ನಿಯಂತ್ರಣ ಮತ್ತು ತಡೆ ಘಟಕದ ಜಿಲ್ಲಾ ಕಾರ್ಯಕ್ರಮಾಧಿಕಾರಿಗಳು ತಿಳಿಸಿದ್ದಾರೆ.

# ಕಾರ್ಮಿಕ ಕಾಯ್ದೆ ಉಲ್ಲಂಘಿಸಿದರೆ ಕ್ರಮ

» **ಚಿತ್ರದುರ್ಗ**

ರಾಜ್ಯದ ವಿವಿಧ ಸೋಲಾರ್ ಮತ್ತು ವಿಂಡ್‌ಮಿಲ್‌ಗಳಲ್ಲಿ ಕೆಲಸ ಮಾಡುತ್ತಿರುವ ಸಾವಿರಾರು ಗುತ್ತಿಗೆ ಮತ್ತು ಖಾಯಂ ನೌಕರರ ಅನುಕೂಲಕ್ಕಾಗಿ ಕಾರ್ಮಿಕ ಇಲಾಖೆಯಿಂದ ಕಾಯ್ದೆಯನ್ನು ತಯಾರು ಮಾಡಿ ಸರ್ಕಾರಕ್ಕೆ ಕಳುಹಿಸಲಾಗಿದೆ. ಅದು ಸಚಿವ ಸಂಪುಟದಲ್ಲಿ ಅನುಮೋದನೆ ಪಡೆದರೆ ನಿಮಗೆ ಎಲ್ಲಾ ರೀತಿಯಿಂದಲೂ ಅನುಕೂಲವಾಗಲಿದೆ ಎಂದು ಕಾರ್ಮಿಕ ಇಲಾಖೆ ದಾವಣಗೆರೆ ಸಹಾಯಕ ಆಯುಕ್ತರಾದ ಡಾ.ಅವಿನಾಶ್ ನಾಯಕ್ ತಿಳಿಸಿದರು.




ಕರ್ನಾಟಕ ರಾಜ್ಯ ಸೋಲಾರ್ ಹಾಗೂ ವಿಂಡ್ ಎನರ್ಜಿ ಎಂಪ್ಲಾಯ್ಸ್ ಯೂನಿಯನ್‌ವತಿಯಿಂದ ನಗರದ ಪತ್ರಿಕಾಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಸಮಾವೇಶ ಹಾಗೂ ಕಾರ್ಮಿಕ ಕಾಯ್ದೆಗಳು & ಕಾರ್ಮಿಕರ ಹಕ್ಕುಗಳು ಕುರಿತು ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಈಗಾಗಲೇ ವಿವಿಧ ರೀತಿಯ ಕಾರ್ಮಿಕರಿಗೆ ಸರ್ಕಾರ ವಿವಿಧ ರೀತಿಯ ಕಾಯ್ದೆಗಳನ್ನು ಜಾರಿ ಮಾಡಿದೆ, ಇದರಲ್ಲಿ ಖಾಯಂ ಹಾಗೂ ಗುತ್ತಿಗೆದಾರರ ನೌಕರರಿಗೆ ಅವರ ವೇತನ, ಕೆಲಸದ ಸಮಯ, ವಿವಿಧ ರೀತಿಯ ಸೌಲಭ್ಯಗಳನ್ನು ಪಡೆಯುವುದಕ್ಕಾಗಿ ನಿಯಮಗಳನ್ನು ಜಾರಿ ಮಾಡಿದೆ ಕೈಗಾರಿಕೆಯ ಮಾಲೀಕರು ಇದನ್ನು ತಪ್ಪದೆ ಜಾರಿ ಮಾಡಬೇಕಿದೆ. ಯಾರು ಜಾರಿ ಮಾಡುವುದಿಲ್ಲವೂ ಅಂತಹ ವಿರುದ್ಧ ಕಾರ್ಮಿಕ ಇಲಾಖೆ ಕಾನೂನು ರೀತಿಯಲ್ಲಿ ಕ್ರಮವನ್ನು ತೆಗೆದುಕೊಳ್ಳುತ್ತದೆ ಎಂದರು. ಕಾರ್ಮಿಕರಾದವರು ತಮಗಾಗಿ ಇರುವಂತ ವಿವಿಧ ರೀತಿಯ ಕಾಯ್ದೆಗಳನ್ನು ತಿಳಿಯಬೇಕಿದೆ. ಇದು ನಮಗೆ ಸಿಗುತ್ತದ್ದೇಯೇ ಇಲ್ಲವೂ ಎಂಬುದರ ಬಗ್ಗೆ ಪರಿಶೀಲಿಸಬೇಕಿದೆ ಒಮ್ಮೆ ಸಿಗದಿದ್ದರೆ ಮಾಲಿಕರ ಬಳಿ ಕೇಳ ಬೇಕು ಅವರು ನೀಡದಿದ್ದರೆ ಕಾರ್ಮಿಕ ಇಲಾಖೆಗೆ ದೂರನ್ನು ನೀಡುವುದರ ಮೂಲಕ ಪಡೆಯಬಹುದಾಗಿದೆ ನಮಗೆ ನಿಮ್ಮ ಬಗ್ಗೆ ಇರುವ ಕಾಯ್ದೆಗಳ ಬಗ್ಗೆ ಮಾಹಿತಿ ಇಲ್ಲದಿದ್ದರೆ ಮಾಲಿಕರು ನಿಮಗೆ ಮೋಸವನ್ನು ಮಾಡುವ ಅವಕಾಶ ಇರುತ್ತದೆ ಎಂದು ತಿಳಿಸಿದರು.

ನೀವು ಕೆಲಸ ಮಾಡುವ ಸ್ಥಳದಲ್ಲಿ ಸರಿಯಾದ ಮೂಲಭೂತ ಸೌಕರ್ಯಗಳು ಇರಬೇಕಿದೆ. ಇಲ್ಲದಿದ್ದ ಪಕ್ಷದಲ್ಲಿ ಇಲಾಖೆವತಿಯಿಂದ ಕೂಡಿಸುವ ಕಾರ್ಯವನ್ನು ಮಾಡಲಾಗುವುದು ಮಾಲಿಕರಿಂದ ನಿಮಗೆ ಸಿಗಬೇಕಾದ ವಿವಿಧ ರೀತಿಯ ಸೌಲಭ್ಯಗಳು ಸಿಗದಿದ್ದರೆ ಇಲಾಖೆವತಿಯಿಂದ ವಿಚಾರಣೆಯನ್ನು ಮಾಡಲಾಗುವುದು ಇಲ್ಲಿ ನ್ಯಾಯ ಸಿಗದಿದ್ದರೆ ಕಾರ್ಮಿಕ ನ್ಯಾಯಾಲಯದಿಂದ ನ್ಯಾಯವನ್ನು ಪಡೆಯಬಹುದಾಗಿದೆ ಎಂದರು.ಸರ್ಕಾರಗಳು ಕಾರ್ಮಿಕರಿಗಾಗಿ ಸುಮಾರು 25 ಕಾಯ್ದೆಗಳನ್ನು ಜಾರಿ ಮಾಡಿದೆ ಇದರಲ್ಲಿ 21 ಕಾಯ್ದೆಗಳು ಕೇಂದ್ರ ಸರ್ಕಾರಕ್ಕೆ ಸಂಬಂಧಿಸಿದ್ದಾದರೆ ಉಳಿದ 4 ಕಾಯ್ದೆಗಳು ರಾಜ್ಯ ಸರ್ಕಾರಕ್ಕೆ ಸಂಭಂವಿಸಿದ್ದಾಗಿದೆ, 1936ರಿಂದಲೇ ಕಾರ್ಮಿಕರಿಗೆ ವೇತನ ಕಾಯ್ದೆ ಜಾರಿಯಾಗಿದೆ. ಅಂದಿನಿಂದ ಇಂದಿನ ದಿನದವರೆಗೆ ಇದರಲ್ಲಿ ವಿವಿಧ ರೀತಿಯ ಬದಲಾವಣೆಯನ್ನು ಮಾಡಲಾಗಿದೆ. ತಾವು ಕೆಲಸ ಮಾಡುವ ಸ್ಥಳದಲ್ಲಿ ಕಾರ್ಮಿಕರಿಗೆ ಆಡಳಿತಮಂಡಳಿಅಥವಾಗುತ್ತಿಗೆದಾರರಿಂದ ಏನಾದರೂ ತೊಂದರೆಯಾದರೆ ಇಲಾಖೆ ಮಧ್ಯ ಪ್ರವೇಶ ಮಾಡುವುದರ ಮೂಲಕ ಸಮಸ್ಯೆಯನ್ನು ಇತ್ಯರ್ಥ ಮಾಡಲಾಗುವುದು ಎಂದು ಹೇಳಿದರು. ಇತ್ತೀಚಿನ ದಿನದಲ್ಲಿ ಸೋಲಾರ್ ಹಾಗೂ ವಿಂಡ್ ಎನರ್ಜಿ ತಯಾರಿಕೆ ಹೆಚ್ಚಾಗುತ್ತಿದ್ದು ಇದರಲ್ಲಿ ಕೆಲಸ ಮಾಡುವವರ ಸಂಖ್ಯೆಯೂ ಸಹಾ ಹೆಚ್ಚಾಗಿದೆ ಈ ಸಮಯದಲ್ಲಿ ಇವರ ಸಮಸ್ಯೆಗಳು ಹೆಚ್ಚಾಗಿದೆ ಈ ಹಿನ್ನಲೆಯಲ್ಲಿ ಇಲಾಖೆಯವತಿಯಿಂದ ಇದರ ಬಗ್ಗೆ ಸರ್ವೆಯನ್ನು ಮಾಡುವುದರ ಮೂಲಕ ವರದಿಯನ್ನು ತಯಾರು ಮಾಡಿ ಸರ್ಕಾರಕ್ಕೆ ಕಳುಹಿಸಲಾಗಿದೆ. ಇದು ಅನುಮತಿ ಪಡೆದು ಕಾಯ್ದೆ ಜಾರಿಯಾದರೆ ನಿಮಗೆ ತುಂಬಾ ಅನುಕೂಲವಾಗಲಿದೆ ಎಂದು ತಿಳಿಸಿದರು.

ಜಿಲ್ಲಾ ಅಧ್ಯಕ್ಷ ವೀರೇಶ್ ನಾಯಕ್ ಹಾರಕನಹಾಳ್ ಮಾತನಾಡಿ, ಇತ್ತೀಚಿನ ದಿನಮಾನದಲ್ಲಿ ಸೋಲಾರ್ ಹಾಗೂ ವಿಂಡ್ ಎನರ್ಜಿ ಕೈಗಾರಿಕೆಗಳ ಸಂಖ್ಯೆ ಹೆಚ್ಚಾಗಿದೆ ಈ ಹಿನ್ನಲೆಯಲ್ಲಿ ಇದರಲ್ಲಿ ಕೆಲಸ ಮಾಡುವವರ ಸಂಖ್ಯೆಯೂ ಹೆಚ್ಚಾಗಿದೆ ಈಗ 10 ಸಾವಿರ ಕಾರ್ಮಿರಿದ್ದರೆ ಮುಂದಿನ ದಿನದಲ್ಲಿ 30 ಸಾವಿರ ಕಾರ್ಮಿಕರಾಗಲಿದ್ದಾರೆ. ಸೋಲಾರ್ ಹಾಗೂ ವಿಂಡ್ ಎನರ್ಜಿಯಿಂದ ಈ 10 ವೆ.ವ್ಯಾ ವಿದ್ಯುತ್ ಉತ್ಪಾದನೆಯಾದರೆ ಮುಂದಿನ ದಿನದಲ್ಲಿ ಸರ್ಕಾರ ರಾಜ್ಯ 4 ಕಡೆಗಳಲ್ಲಿ ಸೋಲಾರ ವಿದ್ಯುತ್ ಉತ್ಪಾದನಾ ಘಟಕಗಳನ್ನು ಪ್ರಾರಂಭ ಮಾಡಲು ಮುಂದಾಗಿದೆ ಇದುವರೆವಿಗೂ ಸರ್ಕಾರ ಸಾಮ್ಯಕ್ಕೆ ಒಳಪಟ್ಟಿದ ಸೋಲಾರ್ ಹಾಗೂ ವಿಂಡ್ ಎನರ್ಜಿ ಕೈಗಾರಿಕೆಗಳು ಇನ್ನೂ ಮುಂದೆ ಖಾಸಗಿಯವರ ಆಡಳಿತಕ್ಕೆ ಒಳಪಡಲಿವೆ ಇದು ದುರಂತವಾಗಿದೆ ಎಂದರು.

ಕರ್ನಾಟಕ ರಾಜ್ಯ ಸೋಲಾರ್ ಎನರ್ಜಿ ಎಂಪ್ಲಾಯ್ಸ್ ಯೂನಿಯನ್‌ನ ಜಂಟಿ ಕಾರ್ಯದರ್ಶಿ ರವಿಕುಮಾರ್ ಮಾತನಾಡಿ, ರಾಜ್ಯದಾದ್ಯಂತ ಹರಡಿರುವ ನೂರಾರು ಸೋಲಾರ್ ಮತ್ತು ವಿಂಡ್ ಮಿಲ್‌ಗಳಲ್ಲಿರುವ ಗುತ್ತಿಗೆ ಮತ್ತು ಖಾಯಂ ನೌಕರರು ಅಸಂಘಟಿತರಾಗಿದ್ದು, ಅವರನ್ನು ಸಂಘಟಿಸುವ ಮತ್ತು ಹೋರಾಟವನ್ನು ವಿಸ್ತರಿಸುವ ಉದ್ದೇಶದಿಂದ ಈ ಸಮಾವೇಶವನ್ನು ಸಂಘಟಿಸುತ್ತಿರುವುದು ಅತ್ಯಂತ ಮಹತ್ವದ ವಿಷಯವಾಗಿದೆ ಎಂದು ತಿಳಿಸಿದರು.ಮುಂಬರುವ ದಿನಗಳಲ್ಲಿ ಈ ನೌಕರರಿಗೆ ಸೇವಾಭದ್ರತೆ, ನೇಮಕಾತಿಪತ್ರ, ಗುರುತು ಚೀಟಿ, ವೇತನ ಚೀಟಿ, ಇಎಸ್‌ಐ–ಪಿಎಫ್, ಬೋನಸ್, ಶೂ–ಸಮವಸ್ತ್ರ, ಇತ್ಯಾದಿ ಬೇಡಿಕೆಗಳಿಗೆ ಧ್ವನಿಯೆತ್ತಲು ಈ ಸಮಾವೇಶವು ಸ್ಫೂರ್ತಿಯಾಗಲಿದೆ. ಒಟ್ಟಾರೆ ರಾಜ್ಯದಾದ್ಯಂತ ಹರಡಿರುವ ನೂರಾರು ಸೋಲಾರ್ ಮತ್ತು ವಿಂಡ್ ಮಿಲ್‌ಗಳಲ್ಲಿರುವ ಗುತ್ತಿಗೆ ಮತ್ತು ಖಾಯಂ ನೌಕರರು ಅಸಂಘಟಿತರಾಗಿದ್ದು, ಅವರನ್ನು ಸಂಘಟಿಸುವ ಮತ್ತು ಹೋರಾಟವನ್ನು ವಿಸ್ತರಿಸುವ ಉದ್ದೇಶದಿಂದ ಈ ಸಮಾವೇಶವನ್ನು ಸಂಘಟಿಸುತ್ತಿರುವುದು ಅತ್ಯಂತ ಮಹತ್ವದ ವಿಷಯವಾಗಿದೆ ಎಂದರು.ಆಲ್ ಇಂಡಿಯಾ ಪವರ್‌ಮೆನ್ಸ್ ಫೆಡರೇಷನ ರಾಜ್ಯ ಕಾರ್ಯದರ್ಶಿ ಗಂಗಾಧರ ಬಡಿಗೇರ್, ಕರ್ನಾಟಕ ರಾಜ್ಯ ಸೋಲಾರ್ ಮತ್ತು ವಿಂಡ್ ಎನರ್ಜಿ ಎಂಪ್ಲಾಯಿಸ್ ಯೂನಿಯನ್‌ನ ಪ್ರಧಾನ ಕಾರ್ಯದರ್ಶಿ ಕಾ। ಮಂಜುನಾಥ ಕೈದಾಳ್ ಆಲ್ ಇಂಡಿಯಾ ಪವರಮೆನ್ ಫೆಡರೇಷನ್ ಅಖಿಲ ಭಾರತ ಅಧ್ಯಕ್ಷರಾದ ಕೆ ಸೋಮಶೇಖರ್ ಆಲ್ ಇಂಡಿಯಾ ಪವರ್‌ಮೆನ್ಸ್ ಫೆಡರೇಷನ್‌ನ ರಾಜ್ಯ ಅಧ್ಯಕ್ಷರಾದ ಕಾ.ವೀರೇಶ್ ಎನ್‌ಎಸ್. ಕರ್ನಾಟಕ ರಾಜ್ಯ ವಿಂಡ್ ಎನರ್ಜಿ ಎಂಪ್ಲಾಯ್ಸ್ ಯೂನಿಯನ್ ಉಪಾಧ್ಯಕ್ಷರಾದ ರಂಗನಾಥ್ ಹಂಪನೂರು ಜಂಟಿ ಕಾರ್ಯದರ್ಶಿ ಲೋಕೇಶ್ ನೀರ್ತಡಿ ಭಾಗವಹಿಸಿದ್ದರು.

## ಪ್ರತಿಯೊಂದು ಕ್ಷೇತ್ರದಲ್ಲಿಯೂ ಪರಿಣತಿ ಹೊಂದಿರುವವರಿದ್ದಾರೆ, ಆದರೆ ಅವರನ್ನು ಗುರುತಿಸಿ ಗೌರವಿಸುವಲ್ಲಿ ವಿಫಲರಾಗುತ್ತಿದ್ದೇವೆ

» **ಹೊಸದುರ್ಗ**

ತಾಲ್ಲೂಕಿನಾದ್ಯಂತ ಕೃಷಿ, ಸಂಗೀತ, ಸಾಹಿತ್ಯ ಹೀಗೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ಪರಿಣತಿ ಹೊಂದಿರುವವರಿದ್ದಾರೆ. ಆದರೆ ಅವರನ್ನು ಗುರುತಿಸಿ ಗೌರವಿಸುವಲ್ಲಿ ವಿಫಲರಾಗುತ್ತಿದ್ದೇವೆ. ಈ ಕಾರ್ಯವನ್ನ ಕನ್ನಡ ಸಾಹಿತ್ಯ ಪರಿಷತ್ ಮಾಡಬೇಕು ಆದರೆ ಇಂತಹ ಕೆಲಸ ನಡೆಯುತ್ತಿಲ್ಲ ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ ವಿಷಾದ ವ್ಯಕ್ತಪಡಿಸಿದರು.



ಕಸಾಪ ತಾಲ್ಲೂಕು ಘಟಕದ ವತಿಯಿಂದ ಪಟ್ಟಣದ ಕನ್ನಡ ಭವನದಲ್ಲಿ ಆಯೋಜಿಸಿದ್ದ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಕನ್ನಡ ವಿಷಯದಲ್ಲಿ ಪೂರ್ಣ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ' ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಮಗು ಜನ್ಮ ತಾಳಿದ್ದಾಗಲೆ ಈ ದೇಶದ ಪ್ರಜೆಯಾಗುತ್ತದೆ. ಇಂದಿನ ಮಕ್ಕಳೇ ರಾಷ್ಟದ ಭವಿಷ್ಯಗಳು. ದೇಶದ ಬಗ್ಗೆ ಪ್ರತಿಯೊಬ್ಬರು ಗೌರವ ಹೊಂದಿರಬೇಕು. ತಾಯಿ ಮತ್ತು ತಾಯ್ನಾಡು ಸ್ವರ್ಗಕ್ಕಿಂತಲೂ ಮಿಗಿಲು. ಆತನ ಭವಿಷ್ಯ, ಸುಖ, ದುಃಖ ಎಲ್ಲವನ್ನೂ ನೀಡುವುದು ತಾಯ್ನಾಡು ಎಂದು ತಿಳಿಸಿದ ಅವರು ವ್ಯಕ್ತಿಯನ್ನು ಬದಲಾಯಿಸುವ ಶಕ್ತಿ ಶಿಕ್ಷಣಕ್ಕಿದೆ. ಅದೇ ಶಿಕ್ಷಣ ಈ ಜಗತ್ತನ್ನೇ ಬದಲಾಯಿಸುತ್ತದೆ. ಅಂತಹ ಶಕ್ತಿ ಹೊಂದಿರುವ ಶಿಕ್ಷಣ ಅತಿ ಶ್ರೇಷ್ಠವಾದದ್ದು. ಹಾಗಾಗಿ ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ವಿದ್ಯಾವಂತರನ್ನಾಗಿ ಮಾಡಬೇಕು ಎಂದು ಕರೆ ನೀಡಿದರು.

ತಾಲ್ಲೂಕು ಕ.ಸಾ.ಪ ಅಧ್ಯಕ್ಷ ಬಿ.ಪಿ. ಓಂಕಾರಪ್ಪ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಕ.ಸಾ.ಪ ಉಪಾಧ್ಯಕ್ಷ ಡಿ.ಟಿ. ಚಂದ್ರಶೇಖರ್, ಕಾರ್ಯದರ್ಶಿ ಸುಮತಿ ಕುಮಾರ್, ಚಿಕ್ಕಮುದ್ದು, ನಿಕಟ ಪೂರ್ವ ಅಧ್ಯಕ್ಷ ಧನಂಜಯಮೆಂಗಸಂದ್ರ, ಮಾಜಿ ಅಧ್ಯಕ್ಷ ಬಾ.ಮೈಲಾರಪ್ಪ, ಮಾಜಿ ಕಾರ್ಯದರ್ಶಿ ನಾಗತಿಹಳ್ಳಿಮಂಜುನಾಥ್, ಮತ್ತೋಡು ಹೋಬಳಿ ಅಧ್ಯಕ್ಷ ರಮೇಶ್, ಜನಪದ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ

ತುಂಬಿನಕೆರೆ ಬಸವರಾಜ್,ಸಮಾಜ ಸೇವಕ ಆಗ್ರೋ ಶಿವಣ್ಣ, ಸುಹಾನ ಬ್ಯಾಂಕ್ ಅಧ್ಯಕ್ಷ ಬಿ.ಅಶ್ರುಫ್‌ವುಲ್ಲಾ, ಕ.ಸಾ,ಪ ಮತ್ತೋಡು ಘಟಕದ ಅಧ್ಯಕ್ಷ ರಮೇಶ್, ಸೇರಿದಂತೆ ಸಾಹಿತ್ಯಾಸಕ್ತರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ನಾಯಕನಹಟ್ಟಿ ಹೋಬಳಿ ವ್ಯಾಪ್ತಿಯ ತೋಟದ ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡುವಂತೆ ಮನವಿ



» **ಚಳ್ಳಕೆರೆ**

ತಾಲ್ಲೂಕಿನ ತಳಕು ವಿಭಾಗದ ಬೆಸ್ಕಾಂ ವ್ಯಾಪ್ತಿಗೆ ಬರುವ ಮುಸ್ಟಲಗುಮ್ಮಿ, ಅಬ್ಬೇನಹಳ್ಳಿ, ಚೌಳಕೆರೆ, ಮುತ್ತಿಗಾರಹಳ್ಳಿ ಮುಂತಾದ ಗ್ರಾಮಗಳಲ್ಲಿ ರಾತ್ರಿ ವೇಳೆ ತೋಟದಲ್ಲಿ ಮನೆಗಳನ್ನು ನಿರ್ಮಿಸಿಕೊಂಡ ಮನೆಗಳಿಗೆ ವಿದ್ಯುತ್ ಸಂಪರ್ಕವಿಲ್ಲದೆ ಅಲ್ಲಿನ ನಿವಾಸಿಗಳು ಪರದಾಡುತ್ತಿದ್ದಾರೆ. ವಿಶೇಷವಾಗಿ ವೃದ್ದರು, ಮಹಿಳೆಯರು, ವಿದ್ಯಾರ್ಥಿಗಳು ರಾತ್ರಿ ವೇಳೆ ಕತ್ತಲಲ್ಲಿ ಕಾಲಕಳೆಯುವ ದುಸ್ಥಿತಿ ಉಂಟಾಗಿದೆ. ಕಾಡುಪ್ರಾಣಿ, ವಿಷಜಂತುಗಳ ಭಯದೊಂದಿಗೆ ಬದುಕಬೇಕಿದೆ. ಆದ್ದರಿಂದ ಕೂಡಲೇ ವಿದ್ಯುತ್ ಸಂಪರ್ಕ ಒದಗಿಸುವಂತೆ ನಿವಾಸಿಗಳು ತಳಕು ಬೆಸ್ಕಾಂ ವಿಭಾಗಕ್ಕೆ ಸೋಮವಾರ ಮನವಿ ಸಲ್ಲಿಸಿದರು. ಗ್ರಾಮ ಮುಖಂಡರಾದ ಸಿ.ಪಿ.ಮಹೇಶ್‌ಕುಮಾರ್, ಬಸವರಾಜು, ಗಂಗಾಧರಯ್ಯ, ಮಂಜುನಾಥ, ಶಿವಮೂರ್ತಿ, ಓಬಯ್ಯ, ಗೋವಿಂದಪ್ಪ, ನಾಗರಾಜು ಮುಂತಾದವರು ಮನವಿ ನೀಡಿ, ಕೂಡಲೇ ಬೆಸ್ಕಾಂ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಆ ಭಾಗದ ಜನರಿಗೆ ವಿದ್ಯುತ್ ಸಂಪರ್ಕ ನೀಡಿ ಅಪಾಯದಿಂದ ಪಾರುಮಾಡಬೇಕೆಂದು ಮನವಿ ಮಾಡಿದ್ದಾರೆ.

ಮನವಿ ಸ್ವೀಕರಿಸಿದ ಎಇಇ ಮಮತ ಮಾತನಾಡಿ, ಮೇಲ್ಕಂಡ ಗ್ರಾಮಗಳ ತೋಟದ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಬೆಸ್ಕಾಂ ನಿಯಮಗಳಡಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು. ಗ್ರಾಮಸ್ಥರು ಇಲಾಖೆಯೊಂದಿಗೆ ಸಹಕಾರ ನೀಡುವಂತೆ ಮನವಿ ಮಾಡಿದರು.

## ಕಬ್ಬಿಗೆ ನ್ಯಾಯ ಮತ್ತು ಲಾಭದಾಯಕ ಬೆಲೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.3151 ಗಳ ದರ ನಿಗಧಿ

**ದಾವಣಗೆರೆ** : ಪ್ರಸಕ್ತ ಸಾಲಿನಲ್ಲಿ ದಾವಣಗೆರೆ ಸಕ್ಕರೆ ಕಾರ್ಖಾನೆ ಲಿ. ಕುಕ್ಕವಾಡ ಇವರು ಸಲ್ಲಿಸಿದ ವರದಿಗಳ ಪ್ರಕಾರ ಕಳೆದ ವರ್ಷ ನುರಿಸಲಾದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿ ಆಧಾರದ ಮೇಲೆ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ ರೂ.3151/– ಗಳ ದರ ನಿಗದಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ನಮ್ಮ ಮಾತೃ ಬಾಷೆ ಕನ್ನಡ ಬದುಕಿನ ಹುಸಿರಾಗಲಿ

» **ಹೊಸದುರ್ಗ**

ಕನ್ನಡವನ್ನ ಬರೀ ಹೊಗಳಿಕೆಗೆ ಸೀಮಿತಗೊಳಿಸದೇ ಅದನ್ನ ಹುಸಿರಾಗಿಸಿಕೊಂಡಾಗ ಕನ್ನಡವನ್ನ ಉಳಿಸಿ ಬೆಳೆಸಲು ಸಾಧ್ಯವಾಗುತ್ತದೆ ನಾವು ನವಂಬರ್ ತಿಂಗಳ ಕನ್ನಡಿಗರಾಗದೆ ಬದುಕಿನ ಉಸಿರಿರುವವರೆಗೂ ಕನ್ನಡಿಗರಾದಾಗ ಮಾತ್ರ ಈ ಕನ್ನಡ ರಾಜ್ಯೋತ್ಸವಕ್ಕೆ ಅರ್ಥ ಕಲ್ಪಿಸಿದಂತಾಗುತ್ತದೆ ಎಂದು ಸಮಾಜ ಸೇವಕ ಆಗ್ರೋ ಹೆಚ್.ಶಿವಣ್ಣ ತಿಳಿಸಿದರು



ಡಾಕ್ಟರ್ ರಾಜ್‌ಕುಮಾರ್ ಮತ್ತು ಪುನೀತ್ ರಾಜಕುಮಾರ್ ಅಭಿಮಾನಿಗಳ ಸಂಘದ ವತಿಯಿಂದ ನಡೆದ ಕನ್ನಡ ರಾಜ್ಯೋತ್ಸವ ಸಮಾರಂಭದ ಶೂಭಾಯಾತ್ರೆ ಉದ್ಘಾಟಿಸಿ ಮಾತನಾಡಿದ ಅವರು ಮಾತೃಭೂಮಿ ಮತ್ತು ತಾಯಿ ಸ್ವರ್ಗಕ್ಕಿಂತ ಮಿಗಿಲಾದವರು ಈ ಇಬ್ಬರನ್ನ ಆರಾಧಿಸುವ ಮಕ್ಕಳು ಬದುಕಿನಲ್ಲಿ ಯಶಸ್ಸು ಕಾಣುವರು. ಕನ್ನಡತನಕ್ಕೆ ಅದಕ್ಕೆ ಬಂದಾಗ ಕನ್ನಡಿಗರಾದ ನಾವೆಲ್ಲರೂ ಸೆಟೆದು ನಿಂತಾಗ ಕನ್ನಡವನ್ನು ಉಳಿಸಲು ಸಾಧ್ಯ ಎಂದರು.

ಇದೇ ಸಂದರ್ಭದಲ್ಲಿ ನಗರದ ವೀರಭದ್ರ ಸ್ವಾಮಿ ದೇವಸ್ಥಾನದಿಂದ ತಾಯಿ ಭುವನೇಶ್ವರಿಯ ಮೆರವಣಿಗೆ ಕನ್ನಡ ಅಭಿಮಾನಿಗಳ ಕನ್ನಡ ಗೀತೆಗಳು, ಕೀಲು ಕುಣಿತ ಸ್ತಬ್ಧ ಚಿತ್ರಗಳೊಂದಿಗೆ ಭುವನೇಶ್ವರಿ ವೃತ್ತ ಮದಕರಿ ವೃತ್ತ ಬಸವೇಶ್ವರ ವೃತ್ತ ಗಾಂಧಿ ವೃತ್ತದ ಮೂಲಕ ಸಾಗಿ ಅಂಬೇಡ್ಕರ್ ವೃತ್ತದಲ್ಲಿ ಕನ್ನಡ ಧ್ವಜವನ್ನು ಆರಿಸಲಾಯಿತು

ಕಾರ್ಯಕ್ರಮದಲ್ಲಿ ಡಾಕ್ಟರ್ ರಾಜ್ ಪುನೀತ್ ರಾಜ್ ಕುಮಾರ್, ಅಭಿಮಾನಿಗಳ ಸಂಘದ ಅಧ್ಯಕ್ಷ ಗೌಡ್ರ ತಿಪ್ಪೇಸ್ವಾಮಿ, ಕಾರ್ಯದರ್ಶಿ ಶಹಜನ್ ಸೇರಿದಂತೆ ಅಪಾರ ಕನ್ನಡ ಅಭಿಮಾನಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮೈಸೂರು ಕಿಸಾನ್ ಮಾಲ್ ಸ್ಥಾಪನೆ: ಅರ್ಜಿ ಸಲ್ಲಿಕೆ ವಿಸ್ತರಣೆ

» ಚಿತ್ರದುರ್ಗ

ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಪ್ರಸ್ತಾಪಿಸಿದಂತೆ, 2024–25ನೇ ಸಾಲಿನಲ್ಲಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ತೋಟಗಾರಿಕೆ ಇಲಾಖೆ ಆವರಣದಲ್ಲಿ "ಮೈಸೂರು ಕಿಸಾನ್ ಮಾಲ್" ಸ್ಥಾಪಿಸಲು ಅರ್ಹ ರೈತ ಉತ್ಪಾದಕ ಸಂಸ್ಥೆಗಳಿಂದ ಆಸಕ್ತಿ ಅಭಿವ್ಯಕ್ತಪಡಿಸುವಿಕೆಯನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಡಿ.16 ರವರೆಗೆ ವಿಸ್ತರಿಸಲಾಗಿದೆ. ಕರ್ನಾಟಕ ಪಬ್ಲಿಕ್ ಪ್ರೊಕ್ಯುರ್‌ಮೆಂಟ್ ಪೋರ್ಟ್‌ಲ್‌ನಲ್ಲಿ ಆಸಕ್ತ ರೈತರ ಉತ್ಪಾದಕ ಸಂಘಗಳು ಡಿ.16 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9449103240 ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಡಿ.4ಕ್ಕೆ ತಾ.ಪಂ ಸಾಮಾನ್ಯ ಸಭೆ ಮುಂದೂಡಿಕೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಡಿ.03 ರಂದು ತಾಲ್ಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ.ಆನಂದ್ ಅವರ ಅಧ್ಯಕ್ಷತೆಯಲ್ಲಿ ನಡೆಯಬೇಕಿದ್ದ ತಾ.ಪಂ ಸಾಮಾನ್ಯ ಸಭೆಯನ್ನು ವಿವಿಧ ಕಾರಣಾಂತರಗಳಿಂದ ಡಿ.4ರಂದು ಬೆಳಿಗ್ಗೆ 10.30ಕ್ಕೆ ಮುಂಡೂಡಲಾಗಿದೆ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿ.3ರಂದು ಅಂಬ್ಯುಲೆನ್ಸ್ ಲೋಕಾರ್ಪಣೆ ಹಾಗೂ 40 ಹಾಸಿಗೆಗಳ ವಾರ್ಡ್ ಉದ್ಘಾಟನೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾಸ್ಪತ್ರೆಯಲ್ಲಿ ಇದೇ ಡಿ.03ರಂದು ಬೆಳಿಗ್ಗೆ 11ಕ್ಕೆ ಅಂಬ್ಯುಲೆನ್ಸ್ ಲೋಕಾರ್ಪಣೆ ಹಾಗೂ 40 ಹಾಸಿಗೆಗಳ ವಾರ್ಡ್ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ), ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಅವರು ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದ್ದಾರೆ.

### ಸ್ಥಾಯಿ ಸಮಿತಿಯ ಚುನಾವಣೆಯ ವೇಳಾಪಟ್ಟಿ

» ದಾವಣಗೆರೆ

ಮಹಾನಗರ ಪಾಲಿಕೆಯ ಪಟ್ಟಣ ಯೋಜನೆ ಮತ್ತು ಸುಧಾರಣೆ ಸ್ಥಾಯಿ ಸಮಿತಿಯಲ್ಲಿ ಖಾಲಿ ಇರುವ ಒಂದು ಸದಸ್ಯರ ಸ್ಥಾನಕ್ಕೆ ಸದಸ್ಯರನ್ನು ಚುನಾಯಿಸಲು ಡಿ.5 ರಂದು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ಸಭೆಯನ್ನು ಆಯೋಜಿಸಲಾಗಿದೆ. ಚುನಾವಣಾ ವೇಳಾ ಪಟ್ಟಿ: ಡಿ.5 ರಂದು ನಾಮಪತ್ರ ಸ್ವೀಕರಿಸುವ ದಿನ. ಪಾಲಿಕೆಯ ಸಭಾಂಗಣದಲ್ಲಿ ಮಧ್ಯಾಹ್ನ 3 ಗಂಟೆಗೆ ಸಭೆ ಪ್ರಾರಂಭಿಸಿ ಹಾಜರಾತಿ ಪಡೆಯುವುದು. ಹಾಜರಾತಿ ಪಡೆದ ನಂತರ ನಾಮಪತ್ರಗಳ ಪರಿಶೀಲನೆ, ಕ್ರಮಬದ್ಧ ನಾಮಪತ್ರಗಳ ಘೋಷಣೆ, ಉಮೇದುವಾರಿಯನ್ನು ಹಿಂತೆಗೆದುಕೊಳ್ಳುವುದು. ಉಮೇದುವಾರರ ಪಟ್ಟಿ ಘೋಷಣೆ. ಅವಿರೋಧ ಆಯ್ಕೆಯಾದಲ್ಲಿ ಫಲಿತಾಂಶ ಘೋಷಣೆ. ಚುನಾವಣೆ ಅಗತ್ಯವಿದ್ದಲ್ಲಿ ಮತಪತ್ರಗಳ ಮೂಲಕ ಮತದಾನ ಪ್ರಕ್ರಿಯೆ ನಡೆಸಲಾಗುವುದು.



# ಒಂದಷ್ಟು ಶುದ್ಧತೆಯೆಡೆಗೆ

**ಸಾವಿನ ಭಯದಿಂದ ತಪ್ಪು ಮಾಡುವುದು ಬಿಡಿ.....**

**ಸೋಲಿನ ಭಯದಿಂದ ಚಿಂತಿಸುವುದನ್ನು ಬಿಡಿ.......**

**ವಿಫಲತೆಯ ಭಯದಿಂದ ಕೊರಗುವುದನ್ನು ಬಿಡಿ......**

ಸಾವು – ಸೋಲು – ವಿಫಲತೆಯ ಭಯ ನಮ್ಮನ್ನು ಜೀವನ ಪೂರ್ತಿ ಹಿಂಡುತ್ತಲೇ ಇರುತ್ತದೆ. ನಾವು ಮಾಡುವ ಬಹುತೇಕ ತಪ್ಪುಗಳು ಇವುಗಳ ಕಾರಣಕ್ಕಾಗಿಯೇ ಆಗಿರುತ್ತದೆ.

ಆಸ್ಪತ್ರೆ ಪೋಲೀಸ್ ನ್ಯಾಯಾಲಯ ದೇವರು ಧರ್ಮ ಸ್ವಾಮಿಗಳು ಎಲ್ಲವುಗಳ ಸುತ್ತ ನಾವು ಸುತ್ತುವುದು ಮತ್ತು ಅನೇಕ ಭ್ರಮಾತ್ಮಕ ಮೌಢ್ಯಗಳಿಗೆ ಒಳಗಾಗುವುದು ಸಹ ಈ ಮೂರರ ಕಾರಣಕ್ಕಾಗಿ.

ಇವುಗಳನ್ನು ಘನತೆಯಿಂದ ಸ್ವೀಕರಿಸುವ, ವಾಸ್ತವವಾಗಿ ಎದುರಿಸುವ, ಸಹಜವಾದ ಕ್ರಿಯೆ ಎನ್ನುವ ಸಾಮಾಜಿಕ ವಾತಾವರಣ ನಮ್ಮ ವ್ಯವಸ್ಥೆಯಲ್ಲಿ ಇಲ್ಲ.

ಮನುಷ್ಯ ಸಂಘ ಜೀವಿ. ಒಂದು ವೇಳೆ ವೈಯಕ್ತಿಕ ನೆಲೆಯಲ್ಲಿ ಇವುಗಳನ್ನು ಸ್ವಾಭಾವಿಕವಾಗಿ ಒಪ್ಪಿಕೊಂಡರು ನಮ್ಮ ಸುತ್ತಮುತ್ತಲಿನ ಜನರ ಪ್ರತಿಕ್ರಿಯೆ ಅತ್ಯಂತ ನಕಾರಾತ್ಮಕವಾಗಿ ಇರುತ್ತದೆ. ಅದನ್ನು ಎದುರಿಸುವುದೇ ಒಂದು ದೊಡ್ಡ ಸವಾಲು.

ಇದು ಹೇಳುವಷ್ಟು ಸುಲಭವಲ್ಲ. ಆದರೆ ನಮ್ಮ ಒಟ್ಟು ವ್ಯಕ್ತಿತ್ವ ಮತ್ತು ಜೀವನಮಟ್ಟ ಸುಧಾರಣೆಯ ದೃಷ್ಟಿಯಿಂದ ಸಾವು ಸೋಲು ಮತ್ತು ವಿಫಲತೆಯ ಭಯವನ್ನು ಮೀರಲೇ ಬೇಕಿದೆ.

ಯಾರೋ ಕೆಲವು ವ್ಯಾವಹಾರಿಕ ವ್ಯಕ್ತಿಗಳ ಯಶಸ್ಸುಗಳನ್ನು ಮಾಧ್ಯಮಗಳಲ್ಲಿ ನೋಡಿ ಅಥವಾ ನಮ್ಮ ಸುತ್ತಮುತ್ತಲಿನ ಅಥವಾ ಪರಿಚಿತರ ಒಂದಷ್ಟು ಆರ್ಥಿಕ ಲಾಭಗಳನ್ನು ನೋಡಿ ನಮ್ಮಲ್ಲಿ ಬೆಳೆಯುವ ಕೀಳರಿಮೆ, ಆಸೆಯಿಂದ ಶ್ರಮದಿಂದ ಮಾಡಿದ ಕೆಲಸದ ಸೋಲು, ಬದುಕಿನ ಒಟ್ಟು ವಿಫಲತೆ ಜೊತೆಗೆ ಸಾವಿನ ಭಯ ನಮ್ಮನ್ನು ಅತ್ಯಂತ ಕೆಳಮಟ್ಟದ ಶರಣಾಗತಿಗೆ ಅಥವಾ ಮನಸ್ಸು ಒಪ್ಪದ ಅಸಹ್ಯ ಹೊಂದಾಣಿಕೆಗೆ ದೂಡುತ್ತದೆ. ವಿಧಿ ಇಲ್ಲ ಅಥವಾ ವಿಧಿಯ ಆಟ ಎಂದು ಸಮಾಧಾನ ಮಾಡಿಕೊಳ್ಳಬಹುದು.



ಜೊತೆಗೆ ನಾವು ಸತ್ತ ನಂತರದ ನಮ್ಮ ಅವಲಂಬಿತರು, ಪ್ರೀತಿ ಪಾತ್ರರು, ವಿರೋಧಿಗಳು ಹೇಗೆ ಬದುಕಬಹುದು ಮತ್ತು ಪ್ರತಿಕ್ರಿಯಿಸಬಹುದು, ನಮ್ಮ ಸೋಲು ಹೇಗೆ ಹೊರಗಿನವರಿಂದ ಕುಹುಕಕ್ಕೆ ಗುರಿಯಾಗಬಹುದು, ನಮ್ಮ ವಿಫಲತೆ ಹೇಗೆ ನಮ್ಮ ಇಡೀ ಬದುಕನ್ನು ಪ್ರಪಾತಕ್ಕೆ ದೂಡಬಹುದು ಎಂಬ ಭಾವನೆಯೇ ನಮ್ಮನ್ನು ಯಶಸ್ಸಿಗಾಗಿ ಹಪಹಪಿಸುವಂತೆ ಮಾಡುತ್ತದೆ. ಈ ಭಯದ ಭಾವನೆಯೇ ನಮ್ಮನ್ನು ಅನೇಕ ತಪ್ಪುಗಳನ್ನು ಮಾಡಲು ಪ್ರೇರೇಪಿಸುತ್ತದೆ. ಏನಾದರೂ ಆಗಲಿ ಸಾಯಬಾರದು, ಸೋಲಬಾರದು ಯಶಸ್ಸು ಆಗಲೇ ಬೇಕು ಎಂದು ನಾವೆಂದೂ ಊಹಿಸದ ಹೀನಾಯ ಕೆಲಸಗಳಿಗೂ ಸಿದ್ದರಾಗುತ್ತೇವೆ. ಇದರಿಂದಾಗಿ ಕೆಲವರು ದುಶ್ಚಟಗಳಿಗೂ ದಾಸರಾಗುತ್ತಾರೆ ಹಾಗೆಯೇ

ತಲೆ ಒಡೆಯಲು ತಲೆ ಹಿಡಿಯಲು ಹೇಸುವುದಿಲ್ಲ. ಭ್ರಷ್ಟಾಚಾರ ನಮಗೆ ಏನೂ ಅನಿಸುವುದಿಲ್ಲ.

ಆದರೆ ಧೈರ್ಯದಿಂದ ಸತ್ತರೆ ಸಾಯಲಿ ಸತ್ತ ನಂತರ ಹೇಗೂ ನನಗೆ ಅರಿವಿರುವುದಿಲ್ಲ ಅಥವಾ ಸೋಲಾಗಲಿ ಅಥವಾ ವಿಫಲವಾಗಲಿ ನನ್ನ ಬದುಕು ನನ್ನ ಆಯ್ಕೆ ಎಂಬ ದೃಢ ನಿರ್ಧಾರಕ್ಕೆ ಬಂದರೆ ಮನಸ್ಸಿನಲ್ಲಿ ಸ್ವಲ್ಪ ಶಾಂತಿ ನೆಮ್ಮದಿ ನೆಲೆಸುತ್ತದೆ.

ಸೂಕ್ಷ್ಮ ಮನಸ್ಸಿನವರು ಇನ್ನೂ ಒಂದು ಹೆಜ್ಜೆ ಮುಂದೆ ಹೋಗಬಹುದು. ಸತ್ತರೆ ಏನಂತೆ ಸೋತರೆ ಏನಂತೆ ಇರುವುದು ಒಂದೇ ಜೀವನ. ಹೆದರುವುದೇಕೆ ಎಂದು ತಮ್ಮಲ್ಲಿರುವ ಸ್ವಲ್ಪ ಭಯದ ಭಾವನೆಯನ್ನು ಕೊಂದುಕೊಳ್ಳಬೇಕು. ಜೊತೆಗೆ ಮಾನ ಮರ್ಯಾದೆ ಎಂಬುದು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ತಮ್ಮ ಸುಖಕ್ಕಾಗಿ ಹುಟ್ಟುಹಾಕಿರುವ ಭ್ರಮೆಗಳು ಎಂದು ಪರಿಗಣಿಸಬೇಕು. ಆಗ ನಿಮ್ಮಲ್ಲಿ ಹೊಸ ವಿನೂತನ ಚೈತನ್ಯ ಮೂಡುತ್ತದೆ. ಹೊಸ ಪ್ರಯೋಗಗಳಿಗೆ ನಮ್ಮನ್ನು ಒಡ್ಡಿಕೊಳ್ಳಬಹುದು.

ಈ ರೀತಿಯ ಧೈರ್ಯ ನಿಮ್ಮಲ್ಲಿ ಉಂಟಾದರೆ ಆಗ ನೀವು ಮೌಢ್ಯಗಳಿಗೆ ದಾಸರಾಗುವುದಿಲ್ಲ, ಲಂಚ ಪಡೆಯುವುದಿಲ್ಲ, ವರದಕ್ಷಿಣೆ ಕೇಳುವುದಿಲ್ಲ, ಇನ್ನೊಬ್ಬರ ಆಸ್ತಿಗೆ ಆಸೆ ಪಡುವುದಿಲ್ಲ. ಆತ್ಮವಂಚನೆ ಮಾಡಿಕೊಳ್ಳುವುದಿಲ್ಲ.ಸ್ವಾಭಿಮಾನ ದಿಂದ ಸ್ವಲ್ಪ ಮಟ್ಟಿಗೆ ನೆಮ್ಮದಿಯಿಂದ ಜೀವನ ಸಾಗಿಸಬಹುದು.

ನೆನಪಿರಲಿ, ಇದೆಲ್ಲವೂ ಒಳ್ಳೆಯ ರೀತಿಯಲ್ಲಿ ನೆಮ್ಮದಿಯ ಬದುಕನ್ನು ಅಪೇಕ್ಷಿಸುವವರಿಗೆ ಮಾತ್ರ.

ದುಷ್ಟತನದ ಕ್ರಿಮಿನಲ್ ಗಳಿಗೆ ಇದು ಯಾವುದೇ ರೀತಿಯಲ್ಲಿಯೂ ಅನ್ವಯಿಸುವುದಿಲ್ಲ.


ಆದ್ದರಿಂದ ಇನ್ನು ಮುಂದೆ ಸಾವು ಸೋಲು ಅಪಯಶಸ್ಸಿನ ಭಯದಿಂದ ತಪ್ಪುಗಳನ್ನು ಮಾಡುವುದು ಬಿಡೋಣ. ಧೈರ್ಯವಾಗಿ ಸ್ವಾಭಿಮಾನದಿಂದ ಸ್ವತಂತ್ರವಾಗಿ ಬದುಕಲು ಪ್ರಯತ್ನಿಸೋಣ........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ.



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಪ್ರಮುಖ ಸುದ್ದಿ

# ಕನಕ, ಪುರಂದರರು ಕನ್ನಡ ಕೀರ್ತನ ಸಾಹಿತ್ಯದ ಅಶ್ವಿನಿ ದೇವತೆಗಳು

» ಹೊಸದುರ್ಗ


ಪ್ರತಿಯೋರ್ವ ಸಾಧಕನ ಸಾಧನೆಯ ಮೊದಲ ಹಂತವೆಂದರೆ ನಾನು ಎಂಬ ಮಮಕಾರ ಹೋಗಬೇಕು. ಆದರೆ ನಾನು ನನ್ನದು ಎಂಬ ಹಂಬಲ ಸುಮ್ಮನೇ ಅಳಿಯುವುದಿಲ್ಲ. ಪರಮಾತ್ಮನ ದಯೆ ಇರಬೇಕು ಎಂದು ತಮ್ಮ ಕೀರ್ತನೆಯಲ್ಲಿ ತಿಳಿಸಿದ್ದಾರೆ . ದಾಸರ ಕೀರ್ತನೆಗಳ ವೈಶಿಷ್ಟ್ಯವೆಂದರೆ ಸರಳ ಭಾಷೆಯಲ್ಲಿ ವಿಷಯವನ್ನು ಮನಮುಟ್ಟುವಂತೆ ತಿಳಿಸುತ್ತಾರೆ. ನಮ್ಮ ಹುಟ್ಟು ಸಾವಿನ ಮಧ್ಯೆ ಬದುಕು ಸಾರ್ಥಕಳ್ಳಬೇಕು ಎಂದು ತಮ್ಮ ಕೀರ್ತನೆಗಳ ಮುಖಾಂತರ ಕನಕದಾಸರು ಜಗತ್ತಿಗೆ ಸಂದೇಶ ನೀಡಿದ್ದಾರೆ ಎಂದು ಯುವ ಉದ್ಯಮಿ ಸದ್ಗುರು ಪ್ರದೀಪ್ ತಿಳಿಸಿದರು.

ಗೊರವಿನಕಲ್ಲು ಕನಕ ಯುವಕ ಸಂಘದ ವತಿಯಿಂದ ನಡೆದ ಕನಕ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಹಳೆಗನ್ನಡ ಮತ್ತು ಹೊಸಗನ್ನಡ ಸಾಹಿತ್ಯದ ಮಧ್ಯೆ ಐದು ಶತಮಾನಗಳ ಹಿಂದೆಯೇ ಆಧ್ಯಾತ್ಮಿಕ ಸಂತಕವಿ ಕನಕದಾಸರು ಮಾನವನ ಬದುಕಿನಲ್ಲಿ ಏನೆಲ್ಲಾ ಎದುರಿಸಬೇಕಾಗುತ್ತದೆ ಎಂಬುದನ್ನು ಚಿತ್ರಿಸುತ್ತಲೇ ಜೀವನ ಮೌಲ್ಯಗಳನ್ನು ತಿಳಿಸಿದ್ದಾರೆ.ಕನಕ ಪುರಂದರರನ್ನು ಕನ್ನಡ ಕೀರ್ತನ ಸಾಹಿತ್ಯದ ಅಶ್ವಿನಿದೇವತೆಗಳೆಂದುಬಣ್ಣಿಸಲಾಗಿದೆ.ದಿನನಿತ್ಯ ಕಾಯಕ ಮಾಡಿ ಬದುಕುವ ಹಾಲುಮತ ಸಮುದಾಯದವರು ಶ್ರಮಜೀವಿಗಳು ಹಾಲುಮತ ಸಮುದಾಯದ ಜನರಲ್ಲಿ ಬಸವ ಬುದ್ಧ ಅಂಬೇಡ್ಕರ್ ಸಿದ್ಧಾಂತವನ್ನು ಅನುಸರಿಸಿ ಇತರೆ ಎಲ್ಲಾ ಸಮುದಾಯವನ್ನು ಸಮಾನತೆಯಿಂದ ಕಾಣುವ ಸಂಸ್ಕಾರವಂತರು ಇದ್ದಾರೆ ಎಂದರು.

ಚಿತ್ರದುರ್ಗ ಡಿಸಿಸಿ ಬ್ಯಾಂಕ್ ನಿರ್ದೇಶಕ ಕೆ ಅನಂತ್ ಮಾತನಾಡಿ ಕನಕದಾಸರ ಜೋಳಿಗೆಯಲಿ ಭಕ್ತಿಯ ಸಿಂಚನವಿದೆ, ನಮ್ಮನು ಕಾಯುವನೊಬ್ಬನಿದ್ದಾನೆ. ಜಗದ ಜಂಜಾಟದಲ್ಲಿ ಸ್ವಾರ್ಥ ಲಾಲಸೆಗಳಲ್ಲಿ ತುಂಬಿದೆ ನಿಸ್ವಾರ್ಥದಿಂದ ಬದುಕಿದಾಗ ಜೀವನ ಪಾವನವಾಗುತ್ತದೆ. ಸಾಂತ್ವನದ ನುಡಿ ಸಾಲದು ಅದರೊಂದಿಗೆ ಆಧ್ಯಾತ್ಮದ ಆಪ್ತತೆಯ ಸವಿ ಬೆರೆಸಬೇಕೆಂದರು ಕನಕದಾಸರು. "ತನು ನಿನ್ನದು ಜೀವನ ನಿನ್ನದು ರಂಗ ಅನುದಿನದಲಿ ಬಾಹ್ಯ ಸುಖ ದುಃಖ ನಿನ್ನದಯ್ಯ" ಸರ್ವಶಕ್ತನಂತೆ ಮೆರೆಯುತ್ತಿರುವ ಮನುಷ್ಯರ ಸ್ವಾತಂತ್ರ್ಯವನ್ನು ಪ್ರಶ್ನಿಸಿದರು ಕನಕದಾಸರು. ನಾವು ಇನ್ನೊಬ್ಬರಿಗಾಗಿ ಕಳೆದುಕೊಳ್ಳುವುದರಲ್ಲೇ ಬದುಕನ್ನು ಪಡೆದುಕೊಳ್ಳುವ ಗುಟ್ಟು ಅಡಗಿದೆ ಎಂಬುದನ್ನು ಕನಕದಾಸರು ತೋರಿಸಿದ್ದಾರೆ ಎಂದರು.

ಕರ್ನಾಟಕ ರಾಜ್ಯ ಪ್ರಾದೇಶಿಕ ಕುರುಬರ ಸಂಘದ ಉಪಾಧ್ಯಕ್ಷ ಎಂಎಚ್, ಕೃಷ್ಣಮೂರ್ತಿ ಮಾತನಾಡಿ ಕನಕದಾಸರು ವಿಶ್ವಮಾನವರಾಗಿ ಸಮಾನತೆ ಸಾರಿದರು, ಪುರೋಹಿತಶಾಹಿಗಳು ಕೃಷ್ಣನ ದರ್ಶನಕ್ಕೆ ಅವಕಾಶ ಕಲ್ಪಿಸದಿದ್ದಾದ್ದಾಗ ನಂತರ ಹರಿಯನ್ನ ಭಜಿಸಿದಾಗ ಹಿಂಬಾಗಿಲಲ್ಲಿ ದರ್ಶನ ನೀಡಿದರು.ಅವರ ತತ್ವಗಳನ್ನು ನಮ್ಮ ಬದುಕಿನಲ್ಲಿ ಅಳವಡಿಕೊಳ್ಳಬೇಕು ಎಂದರು.

ಭಾರತ್ ಸೇವಾದಳದ ಅಧ್ಯಕ್ಷ ಎಂ ಆರ್ ಸಿ ಮೂರ್ತಿ ಮಾತನಾಡಿದರು.ಕಾರ್ಯಕ್ರಮದಲ್ಲಿ ಕಾರೇಹಳ್ಳಿ ರೇವಣಸಿದ್ದೇಶ್ವರ ಮಠದ ಶೇಖರಯ್ಯ ಒಡೆಯರ್, ಕನಕ ಯುವಕ ಸಂಘದ ಅಧ್ಯಕ್ಷ ಶ್ರೀನಿವಾಸ್, ಕುರುಬ ಸಮಾಜದ ಮುಖಂಡರಾದ ಎಂ ಆರ್ ಸಿ ಮೂರ್ತಿ, ಗ್ರಾ.ಪಂ ಉಪಾಧ್ಯಕ್ಷ ರಘು ಗೌಡ,ಹನುಮಂತಪ್ಪ,ರವಿ ಗೌಡ, ಬಸವರಾಜ್, ಸದಸ್ಯರಾದ ರತ್ನಮ್ಮ ಹನುಮಂತಪ್ಪ,ಸುಮಾ, ಮಂಜುನಾಥ್, ಲಕ್ಷ್ಮೀದೇವಿ,ಶ್ರೀ ಹರಿ ಟ್ರಸ್ಟ್ ಅಧ್ಯಕ್ಷ ಜಿಎಂ ಚಂದ್ರಪ್ಪ ಅಂಜನಪ್ಪ, ಕನಕ ಸಾಂಸ್ಕೃತಿಕ ನೌಕರರ ಸಂಘದ ಅಧ್ಯಕ್ಷ ಮಹಾಂತೇಶ್, ಕ ರಾ ಸ ನೌ ಸಂ ನಿರ್ದೇಶಕ ರಮೇಶ್, ಮುಖಂಡ ಕನಕ ಗೋವಿಂದ್, ರವಿಕುಮಾರ್ ಅಂಜನಪ್ಪ, ಗೋವಿಂದಪ್ಪ ರಂಗನಾಥ್, ಸುರೇಶ್ ತಿಪ್ಪೇಸ್ವಾಮಿ ಹಾಜರಿದ್ದರು.



> ಕನಕದಾಸರ ಸಂದೇಶ ಒಂದು ಜಾತಿಗೆ ಸೀಮಿತವಲ್ಲ ಜಾತಿ ವ್ಯವಸ್ಥೆ ವುರೋದಿದಿಸಿದ ಕನಕರು ಸಮಾನತೆ ಕಂಡಿದ್ದರು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕನಕರ ಹಾದಿಯಲ್ಲಿ ಸಾಗುತ್ತಿದ್ದಾರೆ.ಒಗ್ಗಟ್ಟಿನಿಂದ ಬದುಕಬೇಕು, ಎಲ್ಲರೊಂದಿಗೂ ಪ್ರೀತಿ ವಿಶ್ವಾಸ ಗಳಿಸಬೇಕು.ಕನಕದಾಸರ ಕುಲದ ಹಾಲುಮತ ಸಮಾಜ ಬಸವಣ್ಣವರ ಕಾಯಕ ಕೈಲಾಸ ಮೈಗುಡಿಸಿಕೊಂಡು ನಿರಂತರ ಕಾಯಕದಲ್ಲಿ ತೊಡಗಿದ್ದಾರೆ.
>
> » ಆಗ್ರೋ ಶಿವಣ್ಣ, ಸಮಾಜ ಸೇವಕ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T